ಸಂಪುಟ : 10 ಸಂಚಿಕೆ: 46 ಪುಟ : 4+2 ಬೆಲೆ: 3.00 ಮಂಗಳವಾರ ಮಾರ್ಚ್ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 46 Pages : 4+2 Price : 3.00 Tuesday March 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್-18 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 1 - ಎಸ್ ಎಂ. ಕೃಷ್ಣ ನಗರ ಪೂರ್ತಿ ಭಾಗಗಳು. ವಾರ್ಡ್ ನಂ. 22ರಲ್ಲಿ ಗಂಗಿಮಡಿ ಗಿರಣಿ ಲೈನ್, ಈಶ್ವರಗುಡಿ, ದಖನಿಯವರ, ಗಾರವಾಡ ಪ್ರಕಾಶ ಅಂಗಡಿ ಅವರ ಲೈನ್, 1 ರಿಂದ 5 ಲೈನ್‌ಗಳು. ವಾರ್ಡ್ ನಂ. 5, 6, ಹಳ್ಳಿಕೇರಿ ಪ್ಲಾಟ್, ಖಾನಾಪೂರ ಅವರ ಲೈನ್, ಉಳಿದ ಭಾಗಗಳು ವಾರ್ಡ್ ನಂ. 31, 32ರಲ್ಲಿ ದಾಸರ ಓಣಿ, ಸಿಕ್ಕಲಗಾರ ಓಣಿ, ಭಜಂತ್ರಿ ಓಣಿ, ಯಲ್ಲಮ್ಮನ ಗುಡಿ, ಏಳು ಮಕ್ಕಳ ತಾಯಿ ಗುಡಿ, ಗುಜ್ಜರ ಬಸ್ತಿ, ಜೋಡ ಮಾರುತಿ ಗುಡಿ, ಹಳೇ ಕಚೇರಿ ಉಳಿದ ಭಾಗಗಳು,

ವಾರ್ಡ್ ನಂ. 26ರಲ್ಲಿ ಹಳೇ ಬಸ್ ಸ್ಟ್ಯಾಂಡ್, ದನದ ದವಾಖಾನೆ, ಲಕ್ಷ್ಮೀ ಚಾಳ, ಬೇವಿನ ಕಟ್ಟಿ, ಕಬಾಡಿಯವರ ಓಣಿ, ಸಂಗಮ ಬಜಾರ್, ಜನತಾ ಕಿರಾಣಿ, ಸುಧಾ ಹೋಟೆಲ್ ಸಂದಿ ಉಳಿದ ಭಾಗಗಳು.

ಪ್ರಕಟಣೆ:ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕು. ಹಾಗೂ ತಮ್ಮ ನೀರಿನಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆ.ವ್ಹಿ ಬೆಳ್ಳಟ್ಟಿ ಮತ್ತು 110 ಕೆ.ವ್ಹಿ ಬಾಗೇವಾಡಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಮಾರ್ಚ್ 19ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆ.ವ್ಹಿ. ಬನ್ನಿಕೊಪ್ಪ ವಿಂಡ್, 110 ಕೆ.ವ್ಹಿ. ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33 ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸಲ್ಪಡುವ ಎಲ್ಲಾ ನಗರ, ಕೈಗಾರಿಕಾ, ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸುವಂತೆ ತಿಳಿಸಿದೆ.

### 14 ಗ್ರಾ.ಪಂಗಳಲ್ಲಿ ವಿಶೇಷ ಅಭಿಯಾನದ ಫಲ | 10 ಗ್ರಾ.ಪಂಗಳು ಶೇ.100ರಷ್ಟು ಸಾಧನೆ | ಪ್ರಸಕ್ತ ಸಾಲಿನಲ್ಲಿ ಶೇ. 102.01ರಷ್ಟು ಸಾಧನೆ

# ತೆರಿಗೆ ವಸೂಲಿಯಲ್ಲಿ ಜಿಲ್ಲೆಗೆ ಲಕ್ಷ್ಮೇಶ್ವರ ಫಸ್ಟ್

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ತೀರದ ತಲೆ ನೋವಾಗಿದ್ದ ಗ್ರಾ.ಪಂ ತೆರಿಗೆ ಬಾಕಿ ವಸೂಲಾತಿ ಪ್ರಮಾಣವು ದಿನೇ ದಿನೆ ಹೆಚ್ಚಾಗುತ್ತಿದ್ದು, ಜಿಲ್ಲೆಯ 7 ತಾಲೂಕುಗಳಲ್ಲಿ ಗ್ರಾಮ ಪಂಚಾಯಿತಿ ತೆರಿಗೆ ವಸೂಲಿಯಲ್ಲಿ ಲಕ್ಷ್ಮೇಶ್ವರ ತಾಲೂಕು ಶೇ.102.01ರಷ್ಟು ವಸೂಲಿ ಮಾಡಿ ಮೊದಲ ಸ್ಥಾನದಲ್ಲಿದೆ.

ಪ್ರಸಕ್ತ ಸಾಲಿನ ಬೇಡಿಕೆಯಂತೆ 149.25 ಕೋಟಿ ಸೇರಿ 152.25 ಕೋಟಿ ರೂ. ಸಂಗ್ರಹವಾಗಿದ್ದು, ಪ್ರಸಕ್ತ ಸಾಲಿನಲ್ಲಿ ಶೇ.102.01 ಸಾಧನೆಯಾಗಿದೆ. ಲಕ್ಷ್ಮೇಶ್ವರ ತಾಲೂಕಿನ ಒಟ್ಟೂ 14 ಗ್ರಾ.ಪಂಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಶೇ.102.01ರಷ್ಟು ಸಾಧನೆ ಮಾಡುವುದರ ಮುಖಾಂತರ ಗ್ರಾ.ಪಂ ತೆರಿಗೆ ವಸೂಲಿಯಲ್ಲಿ ಇಡೀ ಜಿಲ್ಲೆಯಲ್ಲಿಯೇ ಪ್ರಥಮ ಸ್ಥಾನದಲ್ಲಿದೆ.

> ಗ್ರಾ.ಪಂಗಳು ಆರ್ಥಿಕವಾಗಿ ಸದೃಢವಾಗಲು ಕರ ವಸೂಲಾತಿ ಅತ್ಯವಶ್ಯ. ಈ ನಿಟ್ಟಿನಲ್ಲಿ ತಾಲೂಕಿನ ಗ್ರಾಮ ಪಂಚಾಯಿತಿಯ ಎಲ್ಲ ಸಿಬ್ಬಂದಿಗಳು ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ಕಡ್ಡಾಯವಾಗಿ ಕರ ವಸೂಲಿ ಅಭಿಯಾನದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದ್ದಾರೆ. ಇದರಿಂದ ಪ್ರಸಕ್ತ ಸಾಲಿನ ಕರ ವಸೂಲಾತಿಯಲ್ಲಿ ಲಕ್ಷ್ಮೇಶ್ವರ ತಾ.ಪಂ ಶೇ.102.01 ಪ್ರಗತಿ ಸಾಧಿಸಲು ಸಾಧ್ಯವಾಗಿದೆ. ಬಾಕಿ ಇರುವ ತೆರಿಗೆಯನ್ನು ಸಹ ಪಾವತಿ ಮಾಡಿ ಗ್ರಾಮದ ಅಭಿವೃದ್ಧಿಗೆ ಸಹಕರಿಸಿ.
>
> **- ಕೃಷ್ಣಪ್ಪ ಧರ್ಮರ**
> **ಕಾರ್ಯನಿರ್ವಾಹಕ ಅಧಿಕಾರಿ,**
> **ತಾ.ಪಂ ಲಕ್ಷ್ಮೇಶ್ವರ.**



ವಿಶೇಷ ಅಭಿಯಾನದ ಫಲ: ಹಲವಾರು ವರ್ಷಗಳಿಂದ ಗ್ರಾ.ಪಂ ತೆರಿಗೆ ವಸೂಲಾತಿ ತೀವ್ರ ಮಂದಗತಿಯಲ್ಲಿ ಸಾಗಿದ್ದರಿಂದ ಗ್ರಾ.ಪಂ ವ್ಯಾಪ್ತಿಯಲ್ಲಿ ನಿರಂತರವಾಗಿ ನಡೆಸಿದ ವಿಶೇಷ ಅಭಿಯಾನದ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ. ಮೂರು ಹಂತಗಳಲ್ಲಿ ನಡೆದ ವಿಶೇಷ ಅಭಿಯಾನದಲ್ಲಿ ಗ್ರಾ.ಪಂ ಅಧಿಕಾರಿ, ಸಿಬ್ಬಂದಿ ಹಾಗೂ ಜನಪ್ರತಿನಿಧಿಗಳು ಜನರ ಮನವೊಲಿಸಿ ತೆ-ರಿಗೆ ವಸೂಲಿಯನ್ನು ಮಾಡುತ್ತಿದ್ದು, ಇದರಿಂದಾಗಿ ಗ್ರಾ.ಪಂಗಳ ಆರ್ಥಿಕ ಬಲ ಹೆಚ್ಚಾಗತೊಡಗಿದೆ. ತಾಲೂಕಿನ 14 ಗ್ರಾಮ ಪಂಚಾಯಿತಿಗಳಲ್ಲಿ ಕರವಸೂಲಿ ಹೆಚ್ಚಿನ ಮಟ್ಟದಲ್ಲಿ ಪ್ರಗತಿ ಸಾಧಿಸಲು ಎಲ್ಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಕರವಸೂಲಿಗಾರರು ಗ್ರಾ.ಪಂಗಳಲ್ಲಿ ಸಭೆ ನಡೆಸಿ, ಶೇ.100ರಷ್ಟು ಕಡ್ಡಾಯವಾಗಿ ಕರವಸೂಲಿ ಪ್ರಗತಿ ಸಾಧಿಸಲು ಕರವಸೂಲಿ ಮಾಸಾಚರಣೆ ಹಮ್ಮಿಕೊಳ್ಳಲಾಗಿದೆ.

ಗ್ರಾಮಸ್ಥರಿಗೆ ಗ್ರಾಮ ಪಂಚಾಯಿತಿಯ ಕರ ಪರಿಷ್ಕರಣೆ ಬಗ್ಗೆ ಮತ್ತು ಕರ ವಸೂಲಾತಿ ಬಗ್ಗೆ ಪ್ರಕಟಣೆ ಮೂಲಕ ತಿಳಿಯಪಡಿಸಲಾಗಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಗ್ರಾ.ಪಂ ತೆರಿಗೆ ವಿಧಿಸುವುದು, ತೆರಿಗೆ ಪರಿಷ್ಕರಿಸುವುದು ಮತ್ತು ತೆರಿಗೆ ವಸೂಲಿ ಮಾಡುವ ಸರ್ಕಾರದ ನಿಯಮ ಹಾಗೂ ಸುತ್ತೋಲೆಗಳ ಬಗ್ಗೆ ಮನವರಿಕೆ ಮಾಡಿಕೊಟ್ಟು ಎಲ್ಲ ಗ್ರಾ.ಪಂಗಳು ಅಭಿವೃದ್ಧಿ ಹೊಂದಬೇಕಾದರೆ ಪಂಚಾಯಿತಿ ಹಣಕಾಸಿನಲ್ಲಿ ಸಧೃಡವಾಗಿರುವುದು ಬಹಳ ಮುಖ್ಯವಾಗಿದೆ ಎಂಬ ಅಂಶವನ್ನು ಮನವರಿಕೆ ಮಾಡಿಕೊಟ್ಟ ಪರಿಣಾಮ ಈ ಸಾಧನೆ ಸಾಧ್ಯವಾಗಿದೆ ಎನ್ನುತ್ತಾರೆ ಯಳವತ್ತಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಮತ್ತು ಸಹಾಯಕ ನಿರ್ದೇಶಕಿ (ಪಂ.ರಾ) ಸವಿತಾ ಹುನಗುಂದ.

> ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲ ಗ್ರಾಮಗಳಲ್ಲಿ ಮನೆ-ಮನೆ ಭೇಟಿ ಮತ್ತು ಜಾಥಾ ಕಾರ್ಯಕ್ರಮ ಮೂಲಕ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಲಾಗಿತ್ತು. ಅದರಂತೆ ತಾಲೂಕಿನ 14 ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲ ಕರವಸೂಲಿಗಾರರು ಪ್ರಗತಿ ಸಾಧಿಸಲು ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ಎರಡು ಹಂತಗಳಲ್ಲಿ ಮನೆ ಮನೆಗೆ ತೆರಳಿ ಕರವಸೂಲಿ ಮಾಡುತ್ತ ಬಂದಿದ್ದರು. ಇದರ ಬಗ್ಗೆ ಸಾರ್ವಜನಿಕರು ಸಹ ಸ್ಪಂದಿಸುತ್ತಿದ್ದರು. ಇದರಿಂದ ಗ್ರಾ.ಪಂ ಕರವಸೂಲಿ ಗುರಿ ಸಾಧನೆಯಾಗಲಿದೆ ಎಂಬ ಆಶಾಭಾವನೆಯಿತ್ತು. ಅದು ಈ ಸಾಕಾರವಾದಂತಾಗಿದೆ ಎನ್ನುತ್ತಾರೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ.

ಶೇ.100ರಷ್ಟು ಸಾಧನೆ ಮಾಡಿದ ಗ್ರಾ.ಪಂಗಳು: ಪ್ರಸಕ್ತ ಸಾಲಿನ ಗ್ರಾ.ಪಂ ತೆರಿಗೆ ವಸೂಲಿಯಲ್ಲಿ ಲಕ್ಷ್ಮೇಶ್ವರ ತಾಲೂಕು ಶೇ.102.01ರಷ್ಟು ಸಾಧನೆ ಮಾಡಿ ಮೊದಲ ಸ್ಥಾನದಲ್ಲಿದ್ದರೆ. ತಾಲೂಕಿನ 14 ಗ್ರಾ.ಪಂಗಳ ಪೈಕಿ ರಾಮಗಿರಿ ಶೇ.144.21, ಅಡರಕಟ್ಟಿ ಶೇ.138.92, ಬಟ್ಟೂರ ಶೇ.123.89, ಪು.ಬಡ್ನಿ ಶೇ.114.55, ಸೂರಣಗಿ ಶೇ. 112.12, ಯಳವತ್ತಿ ಶೇ. 107.25, ಶಿಗ್ಲಿ ಶೇ. 103.10, ಹುಲ್ಲೂರ ಶೇ. 102.95, ದೊಡ್ಡೂರು ಶೇ. 101.69, ಮಾಡಳ್ಳಿ ಶೇ. 100.94 ಈ 10 ಗ್ರಾಮ ಪಂಚಾಯಿತಿಗಳು ಪ್ರಸ್ತುತ ವರ್ಷದ ಬೇಡಿಕೆಗೂ ಮೀರಿ ಸಾಧನೆ ಮಾಡಿವೆ. ಉಳಿದ ಸದ್ಯದಲ್ಲೇ ತಮ್ಮ ಬೇಡಿಕೆಯ ಅನುಸಾರ ಪ್ರತಿಶತ ನೂರರಷ್ಟು ತೆರಿಗೆ ವಸೂಲಾತಿ ಮಾಡಲಿವೆ.

### ಎಫ್‌ಎಕ್ಯೂ ಗುಣಮಟ್ಟದ ಕುಸುಬೆ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

# ಖರೀದಿ ಕೇಂದ್ರಗಳ ದುರುಪಯೋಗವಾಗದಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ 2024-25ನೇ ಸಾಲಿನ ಹಿಂಗಾರು ಹಂಗಾಮಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕುಸುಬೆ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ



ಏಜೆನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್‌ಗಳನ್ನು ನೇಮಿಸಬೇಕು. ಜಿಲ್ಲೆಯ ಪ್ರತಿ ರೈತರಿಂದ ಎಕರೆಗೆ 5 ಕ್ವಿಂಟಲ್‌ನಂತೆ ಗರಿಷ್ಠ 20 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಖರೀದಿಸಲು, ಕುಸುಬೆ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಕುಸುಬೆ ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗ ಆಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ.5940/-ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಆದೇಶ ದಿನಾಂಕ 11-3-2024ರನುಸಾರ ನ್ಯಾಪೆಡ್ ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಮತ್ತು ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆಓಎಫ್) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯಾಗಿ ನೇಮಿಸಿದ್ದು, ರೈತರು ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಜರುಗಿಸಲಾಗುವುದು ಎಂದು ತಿಳಿಸಿದರು.

> ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ಜಿಲ್ಲೆಯ 9 ಕಡೆಗಳಲ್ಲಿ ಕುಸುಬೆ ಖರೀದಿ ಕೇಂದ್ರಗಳು-ಗದಗ ತಾಲೂಕು-ಬಳಗಾನೂರ, ಹೊಂಬಳ, ಮುಳಗುಂದ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕು-ರಣತೂರ, ಶಿಗ್ಲಿ, ರೋಣ ಮತ್ತು ಗಜೇಂದ್ರಗಡ ತಾಲೂಕು-ಅಬ್ಬಿಗೇರಿ, ನರೇಗಲ್, ನಿಡಗುಂದಿ, ಮುಂಡರಗಿ-ಬರದೂರಗಳಲ್ಲಿ ಖರೀದಿ ಕೇಂದ್ರಗಳು ಕಾರ್ಯ ನಿರ್ವಹಿಸಲಿವೆ.

ಜಿಲ್ಲೆಯ 9 ಕಡೆ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಇಲಾಖೆಯ ಅಧಿಕಾರಿಗಳು, ಕೆ.ಓ.ಎಫ್. ವ್ಯವಸ್ಥಾಪಕರು ಹಾಜರಿದ್ದರು.

### ಆದರ್ಶ ಶಿಕ್ಷಕ ಗುರುಪಾದಪ್ಪ ವಿ.ನಂಜಪ್ಪನವರ ನಿಧನಕ್ಕೆ

# ಸಭಾಪತಿ ಬಸವರಾಜ ಹೊರಟ್ಟಿ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಡಂಬಳ ಗ್ರಾಮದ ಪ್ರೌಢಶಾಲೆಯ ನಿವೃತ್ತ ಶಿಕ್ಷಕ ಗುರುಪಾದಪ್ಪ ವಿ.ನಂಜಪ್ಪನವರ ನಿಧನಕ್ಕೆ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ನಂಜಪ್ಪನವರ ಒಬ್ಬ ಆದರ್ಶ ಶಿಕ್ಷಕರಾಗುವ ಜೊತೆ-ಗೆ ಹಲವಾರು ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಶಿಕ್ಷಕರಾಗಿದ್ದರು. ನನ್ನ ಮತ್ತು ಅವರ ಒಡನಾಟ 4 ದಶಕಗಳದ್ದು. ನಮ್ಮ ಎಲ್ಲ ಶಿಕ್ಷಕರ ಪರ ಹೋರಾಟದಲ್ಲಿ ಅವರು ಸಕ್ರಿಯರಾಗಿ ಭಾಗವಹಿಸುತ್ತಿದ್ದರು. ಸಂಘಟನೆಯ ಆರಂಭದ ದಿನದಿಂದ ಇಲ್ಲಿಯವರೆಗೆ ನಮ್ಮ ಜೊತೆ ಇದ್ದವರು. ಆ ಭಾಗದ ಶಿಕ್ಷಕರ ಸಮಸ್ಯೆಗಳನ್ನು ನನ್ನ ಗಮನಕ್ಕೆ ಕಾಲಕಾಲಕ್ಕೆ ತಂದು ಪರಿಹಾರ ಸಿಗುವಂತೆ



ನೋಡಿಕೊಳ್ಳುತ್ತಿದ್ದರು.

ಕೇವಲ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸದೆ ಅರ್ಧಕ್ಕೆ ಶಿಕ್ಷಣ ನಿಲ್ಲಿಸಿದ ಅನೇಕ ವಿದ್ಯಾರ್ಥಿಗಳಿಗೆ ಸಹಾಯ ನೀಡಿ ಅವರ ಬಾಳಿಗೆ ಬೆಳಕಾಗಿದ್ದಾರೆ.

ಸದಾ ಸಮಾಜಮುಖಿಯಾಗಿ ಚಿಂತಿಸುತ್ತಿದ್ದ ನಂಜಪ್ಪನವರಂತಹ ಶಿಕ್ಷಕರು ಸಿಗುವದು ಅಪರೂಪ. ತಮ್ಮ ಕಣ್ಣುಗಳನ್ನು ಹಾಗೂ ದೇಹವನ್ನು ವೈದ್ಯಕೀಯ ಕಾಲೇಜಿಗೆ ನೀಡುವ ಮೂಲಕ ಸಾವಿನಲ್ಲೂ ಸಾರ್ಥಕತೆ ಮೆರೆದು, ಆ ಮೂಲಕ ಸಾವಿರಾರು ವೈದ್ಯಕೀಯ ವಿದ್ಯಾರ್ಥಿಗಳ ಅಧ್ಯಯನದ ನೆರವಿಗೆ ನಿಂತಿದ್ದಾರೆ. ಅವರ ನಿಧನದಿಂದ ತೀವ್ರ ದುಃಖವಾಗಿದೆ. ಅವರ ಆತ್ಮಕ್ಕೆ ಪರಮಾತ್ಮ ಶಾಂತಿಯನ್ನು ದಯಪಾಲಿಸಲಿ ಹಾಗೂ ಅವರ ಕುಟುಂಬದ ಸರ್ವ ಸದಸ್ಯರಿಗೆ ದುಃಖವನ್ನು ಬರಿಸುವ ಶಕ್ತಿಯನ್ನು ಆ ದೇವರು ನೀಡಲಿ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅವರು ಪ್ರಾರ್ಥಿಸಿದ್ದಾರೆ.

ನಂಜಪ್ಪನವರ ನಿಧನಕ್ಕೆ ಡಾ. ಬಸವರಾಜ ಧಾರವಾಡ, ಪ್ರಾ. ಶಿವಾನಂದ ಪಟ್ಟಣಶೆಟ್ಟಿ, ಎಸ್.ಎಂ. ಅಗಡಿ, ಎಂ.ಎಚ್ ಪೂಜಾರ್, ಕೊಟ್ರೇಶ್ ಅಂಗಡಿ ಸೇರಿದಂತೆ ಹಲವಾರು ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಯೋಗ ಪಾಠಶಾಲೆಯ ಸುವರ್ಣೋತ್ಸವ ಸೇವಾ ಸಮಿತಿ ರಚನಾ ಸಭೆ

# ಸುವರ್ಣ ಮಹೋತ್ಸವ ಅರ್ಥಪೂರ್ಣವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯ ಎಲ್ಲರಿಗೂ ಬೇಕು. ಪರಿಪೂರ್ಣ ಆರೋಗ್ಯ ಯೋಗದಿಂದ ಮಾತ್ರ ದೊರೆಯುವುದು. ಈ ನಿಟ್ಟಿನಲ್ಲಿ ಶ್ರೀಸಾಮಾನ್ಯರೆಲ್ಲರಿಗೂ ಉಚಿತವಾಗಿ ಯೋಗ ಮೂಲಕ ಆರೋಗ್ಯ ದೊರಕಿಸಿಕೊಡುವ ಯೋಗ ಪಾಠಶಾಲೆಯ ಸುವರ್ಣೋತ್ಸವ ಅರ್ಥಪೂರ್ಣವಾಗಿರಬೇಕೆಂದು ಯೋಗ ಅಭಿಮಾನಿಗಳಾದ ಪ್ರಾ. ಕೆ.ಎಚ್. ಬೇಲೂರ ಅಭಿಪ್ರಾಯಪಟ್ಟರು.

ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಯಶಸ್ಸಿಗೆ ಅಗತ್ಯವಾದ ಸೇವಾ ಸಮಿತಿ ರಚನೆ ಕುರಿತು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಆಯೋಜಿಸಿದ ಸಭೆಗೆ ವಿಶೇಷ ಆಮಂತ್ರಿತರಾಗಿ ಪಾಲ್ಗೊಂಡು ಮಾತನಾಡಿದ ಅವರು, ಸಮಾಜದಲ್ಲಿ ಕೊಡುಗೈ ದಾನಿಗಳು ಸಾಕಷ್ಟಿದ್ದಾರೆ. ಕೇಳುವದಷ್ಟೇ ನಮ್ಮ ಕಾರ್ಯ. ಕೇವಲ ಹಣಕಾಸು ವ್ಯವಸ್ಥೆಗೆ ಗಮನ ಕೊಡದೆ ಸುವರ್ಣೋತ್ಸವ ಸಾರ್ಥಕವಾಗುವಂತೆ ಆಚರಿಸಬೇಕೆಂದು



ಸೂಚಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ ವಿಠೋಬ ಆರ್. ಹರ್ಲಾಪೂರ, ಅಂಜನೇಶ ಮಾನೆ, ಶರಣಯ್ಯ ದೊಡ್ಡಪ್ಪಯ್ಯನವ್ಮಠ ಮಾತನಾಡಿ, ಯೋಗ ಪಾಠಶಾಲೆಯ ಸುವರ್ಣೋತ್ಸವ ಯೋಗಾಭ್ಯಾಸಿಗಳಿಗೆ ದೊರೆತ ಸುವರ್ಣ ಅವಕಾಶವಾಗಿದೆ. ಯಶಸ್ವಿಗೊಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ತಮ್ಮ ವಿಚಾರ ಮಂಡಿಸಿದರು. ಸಭೆಯ ಸದಭಿಪ್ರಾಯದಂತೆ ಮುಖ್ಯವಾಗಿ ಸ್ಮರಣ ಸಂಚಿಕೆ ಪ್ರಕಟಿಸುವುದು, ಸಾಧಕರನ್ನು ಸನ್ಮಾನಿಸುವುದು, ಯೋಗಾಭ್ಯಾಸ ಪ್ರದರ್ಶನ, ಗ್ರಂಥ ಬಿಡುಗಡೆ, ಉಪನ್ಯಾಸ, ಸಹಭೋಜನ, ಸಮಾರೋಪ ಇನ್ನಿತರೆ ಕಾರ್ಯಕ್ರಮಗಳನ್ನು ಜರುಗಿಸುವ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಸಭೆಯ ಎಲ್ಲ ಕಾರ್ಯಕಲಾಪಗಳ ನಿರ್ಣಯ ಮಾಹಿತಿಗಳನ್ನು ಪೂಜ್ಯ ಶ್ರೀಗಳವರಿಗೆ ಸರ್ಮಪಿಸಿ ಅವರ ಅಪ್ಪಣೆಯಂತೆ ಮತ್ತು ಯೋಗ ಪಾಠಶಾಲೆಯ ಆಡಳಿತಾಧಿಕಾರಿಗಳಾದ ಎಸ್.ಎಸ್. ಪಟ್ಟಣಶೆಟ್ಟಿ, ಮ್ಯಾನೇಜರ್ ಎಂ.ಎಸ್. ಅಂಗಡಿ ಇವರ ಸಲಹೆ-ಸಹಕಾರಗಳನ್ನು ಪಡೆದು ಯೋಗ ಪಾಠಶಾಲೆಯ ಸುವರ್ಣೋತ್ಸವ ಸೇವಾ ಸಮಿತಿಯನ್ನು ಪ್ರಕಟಗೊಳಿಸಲಾಗುವುದೆಂದು ಯೋಗ ಪಾಠಶಾಲೆಯ ನಿರ್ದೇಶಕರಾದ ಯೋಗಾಚಾರ್ಯ ಕೆ.ಎಸ್. ಪಲ್ಲೇದ ತಿಳಿಸಿದರು. ಸಭೆಯಲ್ಲಿ ವಿ.ಎಸ್. ಉಪ್ಪಿನ, ಅಶೋಕ ಕೊಡಗಲಿ, ಗಂಗಾಧರ ಕೆಂಗಾರ, ಶಾಂತಾ ಮುಂದಿನಮನಿ, ಶೋಭಾ ಗುಗ್ಗರಿ, ಶೈಲಾ ಕೊಡೆಕಲ್, ಜಯಶ್ರೀ ವಸ್ತ್ರದ, ಪಾರ್ವತಿ ಭೂಮಾ, ವೀಣಾ ಗೌಡರ, ಲತಾ ಮಾನೆ ಮತ್ತು ಯೋಗ ಅಭಿಮಾನಿ ಬಂಧುಗಳು, ಯೋಗಾಸಕ್ತರು ಉಪಸ್ಥಿತರಿದ್ದರು.

> ಸಭೆಯ ಅಧ್ಯಕ್ಷತೆ ವಹಿಸಿದ್ದ ಬಸವ ಯೋಗ ಚಿಂತನ ಕೂಟದ ಅಧ್ಯಕ್ಷರಾದ ಎಂ.ಎಸ್. ಶಿರಿಯಣ್ಣವರ ಮಾತನಾಡಿ, ಯೋಗ ಪಾಠಶಾಲೆ ಸ್ಥಾಪನೆಯಾಗಿ 50 ವರ್ಷ ಸಮೀಪಿಸಿದರೂ ಅದಕ್ಕೊಂದು ನಿಶ್ಚಿತ ನೆಲೆ (ಕಟ್ಟಡ) ಇಲ್ಲದಿರುವುದು ವಿಷಾದನೀಯ. ಇತ್ತೀಚೆಗೆ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಯೋಗ ಪಾಠಶಾಲೆಗೆ 2 ಎಕರೆ ಭೂಮಿ ನೀಡಿರುವುದು ಶ್ಲಾಘನೀಯ ಕಾರ್ಯ. ಶೀಘ್ರವಾಗಿ ಈ ಜಾಗೆಯಲ್ಲಿ ಯೋಗ ಭವನ ನಿರ್ಮಿಸಲು ಶ್ರಮಿಸೋಣ. ಈಗ ಆಚರಿಸಲಿರುವ ಯೋಗ ಪಾಠಶಾಲೆಯ 50ನೇ ವಾರ್ಷಿಕೋತ್ಸವದ ಸವಿನೆನಪಿಗಾಗಿ ಯೋಗ ಭವನ ನಿರ್ಮಾಣ ಕಾರ್ಯ ಶೀಘ್ರದಲ್ಲಿ ಪ್ರಾರಂಭಿಸಬೇಕು. ಎಲ್ಲರೂ ಸೇರಿ ಆ ಕಾರ್ಯ ಯಶಸ್ಸಿಗೊಳಿಸೋಣ ಎಂದು ಹೇಳಿದರು.

ಪ್ರಾರಂಭದಲ್ಲಿ ಡಾ. ಎಂ.ವಿ. ಐಹೊಳ್ಳಿ ಪ್ರಾರ್ಥಿಸಿದರು. ಚೇತನ ಚುಂಚಾ ಸ್ವಾಗತ ಕೋರಿದರು. ಬಸವರಾಜ ತೋಟಗೇರ ನಿರೂಪಿಸಿದರು. ಶಿವನಗೌಡ ಗೌಡರ ವಂದಿಸಿದರು.

## ಸಂಪಾದಕೀಯ

# ಪ್ರವಾಸಿಗರಿಗೆ ಬೇಕು ರಕ್ಷಣೆ

ಕೊಪ್ಪಳ ಜಿಲ್ಲೆಯಲ್ಲಿ ವಿದೇಶಿ ಮಹಿಳೆ ಮೇಲೆ ನಡೆದ ಅತ್ಯಾಚಾರ ಪ್ರಕರಣದಿಂದ ಪ್ರವಾಸೋದ್ಯಮ ಕ್ಷೇತ್ರಕ್ಕೆ ಮಂಕು ಬಡಿದಿದೆ. ಈ ಘಟನೆಯ ನಂತರ ಹಂಪಿ ಸೇರಿದಂತೆ ಬಿಸಿಲು ಪ್ರದೇಶದ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರು ನಿಧಾನವಾಗಿ ಕಡಿಮೆಯಾಗುತ್ತಿದ್ದಾರೆ.

ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿ ಸೇರಿರುವ ಹಂಪಿ ವೀಕ್ಷಣೆಗೆ ವಿದೇಶದಿಂದ ಆಗಮಿಸುವ ಪ್ರವಾಸಿಗರ ಸಂಖ್ಯೆಯೇ ಹೆಚ್ಚು. ರಾಜ್ಯದ ಇನ್ನುಳಿದ ಪ್ರವಾಸ ತಾಣಗಳಿಗಿಂತ ಹಂಪಿ ವೀಕ್ಷಣೆಗೆ ವಿದೇಶಿ ಪ್ರವಾಸಿಗರು ಅತಿ ಹೆಚ್ಚು ಆಸಕ್ತಿ ತೋರುತ್ತಾರೆ. ಅದರ ಜೊತೆಗೆ ಅಕ್ಕಪಕ್ಕದ ಜಿಲ್ಲೆಗಳ ಪ್ರವಾಸ ತಾಣಗಳಿಗೂ ಸಹಜವಾಗಿ ಭೇಟಿ ನೀಡುತ್ತಾರೆ. ಬಳ್ಳಾರಿ, ಕೊಪ್ಪಳ, ವಿಜಯನಗರ ಜಿಲ್ಲೆಗಳಲ್ಲಿ ಕೈಗಾರಿಕೆ ಜೊತೆಗೆ ಪ್ರವಾಸೋದ್ಯಮವೂ ವಿಪುಲವಾಗಿ ಬೆಳೆದಿದೆ. ಆದರೆ ವಿದೇಶಿ ಪ್ರವಾಸಿಗರಿಗೆ ಈ ತಾಣಗಳಲ್ಲಿ ರಕ್ಷಣೆ ಇಲ್ಲದಂತಾಗಿದೆ.

ವಿದೇಶಿ ಮಹಿಳೆಯರ ಮೇಲೆ ನಡೆದ ಲೈಂಗಿಕ ದೌರ್ಜನ್ಯ ಪ್ರಕರಣಗಳು ಇದೇ ಮೊದಲೇನಲ್ಲ. ಆದರೂ ಸ್ಥಳೀಯ ಆಡಳಿತ ಎಚ್ಚೆತ್ತುಕೊಳ್ಳದ ಪರಿಣಾಮ ಇತ್ತೀಚಿಗೆ ಗಂಭೀರವಾದ ಘಟನೆ ಸಂಭವಿಸಿತು. ಅಂತಹ ಕಹಿ ಘಟನೆಗಳು ನಡೆಯದಂತೆ ಜಿಲ್ಲಾಡಳಿತ ಕೈಗೊಂಡಿರುವ ಕ್ರಮ ಹಾಸ್ಯಸ್ಪದವಾಗಿದೆ.

ಪ್ರವಾಸಿಗರ ರಕ್ಷಣೆಗೆ ಜಿಲ್ಲೆಯಲ್ಲಿ ಪ್ರವಾಸಿ ಮಾರ್ಗದರ್ಶಿ ಕೇಂದ್ರ ಒಂದನ್ನು ಸ್ಥಾಪನೆ ಮಾಡಿದ್ದಾರೆ. ಪ್ರವಾಸಿಗರಿಗೆ ಅಗತ್ಯ ಮಾಹಿತಿ ರಕ್ಷಣೆ ನೀಡಲು ಈ ಸಹಾಯವಾಣಿ ಬೆಳಗ್ಗೆ 8 ರಿಂದ ರಾತ್ರಿ 8 ಗಂಟೆವರೆಗೆ ತೆರದಿರಲಿದೆ. ಆದರೆ ಇದರಿಂದ ಪ್ರವಾಸಿಗರನ್ನ ರಕ್ಷಣೆ ಮಾಡಲು ಹೇಗೆ ಸಾಧ್ಯ?

ಸಂಕಟ ಬಂದಾಗ ಕಾಟಾಚಾರಕ್ಕೆ ಎನ್ನುವಂತೆ ಸಹಾಯವಾಣಿ ತೆರೆಯುವುದರಿಂದ ಪ್ರವಾಸಿಗರ ರಕ್ಷಣೆ ಸಾಧ್ಯವಿಲ್ಲ. ಪೊಲೀಸ್ ಇಲಾಖೆ ವಿದೇಶಿ ಪ್ರವಾಸಿಗರು ಹೆಚ್ಚು ಓಡಾಡುವ ಕಡೆಗಳಲ್ಲಿ ಗಸ್ತು ಹೆಚ್ಚಿಸಬೇಕು. ಅದರಲ್ಲೂ ಒಂಟಿಯಾಗಿ ಓಡಾಡುವಂತಹ ಪ್ರವಾಸಿಗರ ಬಗ್ಗೆ ಮಾಹಿತಿ ಪಡೆದು, ಆಯಾ ಸ್ಥಳದಲ್ಲಿ ಪೊಲೀಸರನ್ನ ನಿಯೋಜಿಸಬೇಕು. ಅಂದಾಗ ಪ್ರವಾಸಿಗರು ಧೈರ್ಯದಿಂದ ಪ್ರವಾಸಿ ತಾಣಗಳಲ್ಲಿ ಓಡಾಡಲು ಸಾಧ್ಯವಾಗುತ್ತದೆ.

## ಮೈಕ್ರೋ ಫೈನಾನ್ಸ್ ಕಿರುಕುಳ: ಸುಗ್ರೀವಾಜ್ಞೆ ಪ್ರಶ್ನಿಸಿದ್ದ ಅರ್ಜಿ ವಜಾ ಮಾಡಿದ ಹೈಕೋರ್ಟ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಇತ್ತೀಚೆಗೆ ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಎಷ್ಟೋ ಅಮಾಯಕರು ತಮ್ಮ ಜೀವವನ್ನೇ ಬಲಿ ಕೊಟ್ಟಿದ್ದಾರೆ. ಎಷ್ಟೋ ಬಡವರು ಊರನ್ನೇ ತೊರೆದಿದ್ದಾರೆ.

ಮೈಕ್ರೋ ಫೈನಾನ್ಸ್ ಕಂಪನಿಗಳು ಮತ್ತು ಖಾಸಗಿ ವ್ಯಕ್ತಿಗಳಿಂದ ನಡೆಯುತ್ತಿರುವ ಕಿರುಕುಳ ತಪ್ಪಿಸಲು ರಾಜ್ಯ ಸರ್ಕಾರ ಕಳುಹಿಸಿದ್ದ ಕರ್ನಾಟಕ ಕಿರುಸಾಲ ಮತ್ತು ಸಣ್ಣ ಸಾಲ ಸುಗ್ರೀವಾಜ್ಞೆ-2025 ಹೊರಡಿಸಲಾಗಿತ್ತು. ಆದ್ರೆ, ಇದನ್ನು ಪ್ರಶ್ನಿಸಿ ಕರ್ನಾಟಕ ಹೈಯರ್ ಪರ್ಚೇಸಿಂಗ್ ಅಸೋಸಿಯೇಷನ್ ಹೈಕೋರ್ಟ್ಗೆ ರಿಟ್ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯ ವಾದ ಪ್ರತಿವಾದ ಆಲಿಸಿದ್ದ ಹೈಕೋರ್ಟ್ ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ವಜಾ ಮಾಡಿದೆ.

ಕರ್ನಾಟಕ ಹೈಯರ್ ಪರ್ಚೇಸಿಂಗ್ ಅಸೋಸಿಯೇಷನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ನ್ಯಾಯಪೀಠ, ವಿಚಾರಣೆ ಪೂರ್ಣಗೊಳಿಸಿ ಇಂದಿಗೆ ಆದೇಶವನ್ನು ಕಾಯ್ದಿರಿಸಿತ್ತು.

### 'ಸ್ತ್ರೀ ಸಾಧನೆಯ ಸಿರಿ' ಕಾರ್ಯಕ್ರಮದಲ್ಲಿ ಶಿಕ್ಷಕಿ ಜ್ಯೋತಿ ಗಣಪ್ಪನವರ ಅಭಿಮತ

# ಮಹಿಳೆಯರಿಗೆ ಸಮಾನತೆ ಸಿಗುವಂತಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿಯೇ ಅನುಭವ ಮಂಟಪದಲ್ಲಿ ಬಸವಣ್ಣನವರು ಸೇರಿದಂತೆ ಅನೇಕ ಶರಣರು, ಮಹಿಳೆಯರಿಗೂ ಸಮಾನತೆಯನ್ನು ಪ್ರತಿಪಾದಿಸಿದರು. ಈಗಲೂ ಡಾ.ಅಂಬೇಡ್ಕರ್ ಅವರ ಆಶಯದಂತೆ ಲಿಂಗ ತಾರತಮ್ಯ ತೋರದ, ಮಹಿಳೆಯರ ಪರ ಅನೇಕ ಕಾನೂನುಗಳಿದ್ದರೂ ಸಂಪೂರ್ಣ ಅನುಷ್ಠಾನಗೊಳ್ಳಲು ಮೀನ-ಮೇಷ ಎಣಿಸುವಂತಾಗಿದೆ ಎಂದು ಮುಂಡರಗಿ ತಾಲೂಕಿನ ಮೇವುಂಡಿ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕಿ ಜ್ಯೋತಿ ಗಣಪ್ಪನವರ ಹೇಳಿದರು.

ಗದಗ ತಾಲೂಕಾ ಕಸಾಪ ಆಶ್ರಯದಲ್ಲಿ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ 'ಸ್ತ್ರೀ ಸಾಧನೆಯ ಸಿರಿ' ಕಾರ್ಯಕ್ರಮದಲ್ಲಿ ಮಹಿಳೆ ಮತ್ತು ಶಿಕ್ಷಣದ ಕುರಿತು ಉಪನ್ಯಾಸ ನೀಡಿದರು.

ರಾಜಕೀಯ, ಸಮಾಜಿಕ ಅಂತರ ಕಡಿಮೆಯಾಗಿ ಮಹಿಳೆಯರ ಘನತೆ ಎತ್ತಿ ಹಿಡಿಯುವ ಕೆಲಸ ನಿರಂತರವಾಗಿರಬೇಕು. ಸಂವಿಧಾನದ ಆಶಯದಂತೆ ಮಹಿಳೆ ಕೂಡಾ ಸಮಾಜದ ಮುಖ್ಯ ಭಾಗವಾಗಿದ್ದು, ಎಲ್ಲ ಕ್ಷೇತ್ರಗಳಲ್ಲಿ ಅದರಲ್ಲಿಯೂ ಉದ್ಯೋಗ ಮಾಡುವ ಸ್ಥಳದಲ್ಲಿ ಮಹಿಳೆಗೆ ತನ್ನದೇ ಆದ ಗೌರವ, ಘನತೆ



ಕೊಡುವಂತಾಗಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷೆ ಶೋಭಾ ಆಡಿನ ಮಾತನಾಡಿ, ಮಹಿಳೆಯರು ಕೂಡಾ ಹೊಸ ವಿಚಾರಗಳೊಂದಿಗೆ ಜೀವನ ನಡೆಸುವದರ ಜತೆಗೆ ಸ್ವಾವಲಂಬಿ ಬದು-ಕಿಗೆ ಬೇಕಾಗುವ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಇದರಿಂದ ಸಮಾಜದಲ್ಲಿ ಸಮಾನತೆ ತರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸವಿತಾ ಅಂಗಡಿ, ಶೋಭಾ ಯಕ್ಕೇಲಿ ತಮ್ಮ ಅನುಭವ ಹಂಚಿಕೊಂಡರು. ಅಧ್ಯಕ್ಷತೆ ವಹಿಸಿದ್ದ ಗದಗ ತಾಲೂಕಾ ಕಸಾಪ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ ಮಾತನಾಡಿ, ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಸಾಧಿಸುತ್ತಿದ್ದಾರೆ. ಆದರೂ ಅವರು ತಮ್ಮ ಕುಟುಂಬ, ಸಮಾಜ ಮತ್ತು ನೆರೆಹೊರೆಯವರೊಂದಿಗೆ ಇರುವ ಬಾಂಧವ್ಯ ಅರಿತುಕೊಂಡು ಅದರಂತೆ ನಡೆಯಬೇಕು ಎಂದರು.

ಬಸವರಾಜ ಗಣಪ್ಪನವರ ರಚನೆಯ 'ಕರಿಬೇವಿನ ಸಸಿ' ಕತೆಯನ್ನು ಶಿಕ್ಷಕಿ ಬಸಮ್ಮ ಹೊಂಬಳ ಸಾದರಪಡಿಸಿದರು. ಮಂಜುಳಾ ವೆಂಕಟೇಶಯ್ಯ ಮತ್ತು ನೀಲಮ್ಮ ಅಂಗಡಿ ಅವರಿಂದ ಸಂಗೀತ ಕಾರ್ಯಕ್ರಮ ಜರುಗಿದವು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಕತೆಗಾರ ಬಸವರಾಜ ಗಣಪ್ಪನವರ ಪ್ರೊ. ಕೆ.ಎಚ್. ಬೇಲೂರ, ಶಾಂತಾ ಗಣಪ್ಪನವರ, ಭಾರತಿ ಕೋಟಿ, ಪುಷ್ಪಾ ಭಂಡಾರಿ, ಕಿಶೋರಬಾಬು ನಾಗರಕಟ್ಟಿ, ಸಿ.ಕೆ. ಗಣಪ್ಪನವರ, ಚನ್ನಪ್ಪಗೌಡರ ಇತರರು ಪಾಲ್ಗೊಂಡಿದ್ದರು.

ಗದಗ ಕಸಾಪ ಪದಾಧಿಕಾರಿಗಳಿಂದ ವಿಶ್ವನಾಥ ಬೇಂದ್ರೆ ಅವರ ನಿರ್ದೇಶನದ 'ಕನ್ಯಾ ಬೇಕು ಕನ್ಯಾ' ಎಂಬ ನಾಟಕ ಪ್ರದರ್ಶನಗೊಂಡಿತು. ಜ್ಯೋತಿ ಹೇರಲಗಿ, ಸ್ವಾಗತಿಸಿದರು, ಪ್ರೊ. ಡಿ.ಎಸ್. ನಾಯಕ ನಿರೂಪಿಸಿದರು. ಪಾರ್ವತಿ ಬೇವಿನಮರದ ವಂದಿಸಿದರು.

ಕೇವಲ ಮಾತುಗಳಲ್ಲಿ ಸ್ತ್ರೀ ಸಮಾನತೆ ಗೌರವ ಎಂದರಷ್ಟೇ ಸಾಲದು. ಜೀವನದ ಪ್ರತಿ ಹಂತದಲ್ಲಿಯೂ ಮಹಿಳೆಯರಿಗೆ ಗೌರವ ಸಿಗಬೇಕು. ಮಹಿಳೆಗೆ ಸಿಗುವ ಎಲ್ಲ ಹಕ್ಕುಗಳು ಅನುಷ್ಠಾನಗೊಳ್ಳಬೇಕು. ಕೇವಲ ಮಹಿಳೆಯರಿಗೆ ಮೀಸಲಾಗಿ ಕೊಡುವದಲ್ಲ, ಮದ್ಯರಾತ್ರಿ ನಿರ್ಭಯದಿಂದ ಮಹಿಳೆ ಒಬ್ಬಂಟಿಯಾಗಿ ಯಾವದೇ ಅಪಾಯವಿಲ್ಲದೆ ಓಡಾಡಿಕೊಂಡರೆ ಮಾತ್ರ ಅವಳಿಗೆ ಸಿಗುವ ನಿಜವಾದ ಮೀಸಲಾತಿ ಎಂದು ಜ್ಯೋತಿ ಗಣಪ್ಪನವರ ಹೇಳಿದರು.

# ನೀರನ್ನು ಪೋಲು ಮಾಡಬಾರದು

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಮಾರುಕಟ್ಟೆಯಲ್ಲಿ ಬಿದಿ ಬದಿ ವ್ಯಾಪಾರಸ್ಥರ ಸಂಘದಿಂದ ಸಾರ್ವಜನಿಕರ ಅನುಕೂಲಕ್ಕಾಗಿ ನೀರಿನ ಅರವಟ್ಟಿಗೆಯನ್ನು ಸಂಘದ ಅಧ್ಯಕ್ಷ ಭೀಮಣ್ಣಾ ಕೋಳಿ ಉದ್ಘಾಟಿಸಿದರು. ಈ ಸಚಿದರ್ಭದಲ್ಲಿ ಮಾತನಾಡಿದ ಅವರು, ಬೇಸಿಗೆಯಲ್ಲಿ ಪ್ರತಿವರ್ಷ ಜನಸಾಮಾನ್ಯರಿಗೆ ಕುಡಿಯುವ ನೀರಿನ ದಾಹ ನೀಗಿಸಲು ಅರವಟ್ಟಗೆ ಸ್ಥಾಪಿಸಲಾಗುತ್ತಿದೆ. ನೀರು ಅತ್ಯಮೂಲ್ಯವಾದುದು. ಪ್ರತಿಯೊಂದು ಹನಿಯೂ ಜೀವ ರಕ್ಷಣೆಗೆ ಸಹಕಾರಿಯಾಗಿದ್ದು, ಪ್ರಾಣಿ-ಪಕ್ಷಿಗಳಿಗೂ ನೀರೊದಗಿಸುವ ಕೆಲಸವಾಗಬೇಕು. ಬೇಸಿಗೆಯಲ್ಲಿ ಸಾರ್ವಜನಿಕರು ನೀರನ್ನು ಪೋಲು ಮಾಡಬಾರದು ಎಂದರು.

ಸಿ.ಪಿ. ಡಾಲಾಯತ, ಮಾಹಾಂತೇಶ ಕಮ್ಮಾರ, ಫಕ್ಕೀರಯ್ಯ ಕೆಂಭಾವಿಮಠ, ರತ್ನವ್ವ ಭಜಂತ್ರಿ, ಚಾಂದಸಾಬ ಢಾಲಾಯತ, ಮಾಹಾಂತಪ್ಪ ಮಾಡೊಳ್ಳಿ, ಸುರೇಶ ಸುಣಗಾರ ಇದ್ದರು.



# ಲಾನ್ ಟೆನ್ನಿಸ್ ಕೋರ್ಟ್ ಶಿಲಾನ್ಯಾಸ ಸಮಾರಂಭ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಳಸಾಪೂರ ರಸ್ತೆಯ ಒಳಾಂಗಣ ಕ್ರೀಡಾಂಗಣ ಹಿಂಭಾಗದಲ್ಲಿ ಲಾನ್ ಟೆನ್ನಿಸ್ ಕೋರ್ಟ್ ಶಿಲಾನ್ಯಾಸಕ್ಕೆ ರವಿವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಡಾ. ಶ್ರೀಧರ್ ವಿ.ಕುರಡಗಿ, ಶ್ರೀನಿವಾಸ ಬದಿ, ಶಿವಕುಮಾರ್ ಪಾಟೀಲ್, ಡಾ. ಪವನ್ ಪಾಟೀಲ್, ಡಾ. ಆದಿತ್ಯ ಘೋಡ್ಕಿಂಡಿ, ವಿಕಾಸ್ ಖಟ್ವತೆ, ವೀರೇಶ್ ವಿಜಾಪುರ, ವಿನಯಕುಮಾರ್ ಹೂಗಾರ್, ನಿಖಿಲ್ ಖಾತರಕಿ, ಅಜಿತ್, ರಘು ಮೆಹರ್ವಾಡಿ, ಅಶ್ಫಕ್ ಲಖಾನಿ, ಡಾ. ಜೆ.ಸಿ. ಶಿರೋಳ್, ಡಾ. ವಿ.ಸಿ. ಶಿರೋಳ್ ಮತ್ತಿತರರು ಇದ್ದರು.



ರಾಜ್ಯ ಅರಣ್ಯ ಸಚಿವ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾದ ಈಶ್ವರ ಖಂಡ್ರೆ ರವಿವಾರ ಗದುಗಿಗೆ ಆಗಮಿಸಿದಾಗ ವೀರಶೈವ ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ನೇತೃತ್ವದಲ್ಲಿ ಮಹಾಸಭಾದ ಪದಾಧಿಕಾರಿಗಳು ಹೂಗುಚ್ಛ ನೀಡಿ ಬರಮಾಡಿಕೊಂಡರು. ಈ ಸಂದರ್ಭದಲ್ಲಿ ಮಹಾಸಭಾದ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಅಂಗಡಿ, ವಿಜಯ ಮುತ್ತಿನಪೆಂಡಿಮಠ, ಎಸ್.ವ್ಹಿ. ಮೆಣಸಿನಕಾಯಿ, ಶ್ರೀಶೈಲಪ್ಪ ಚಳಗೇರಿ, ಗಣೇಶ ಗುಡಿಮನಿ, ಅಣ್ಣಿಗೇರಿ, ಜೀವನಗೌಡ್ರ ಮುಂತಾದವರಿದ್ದರು.

# ದಿ. ಕೆ.ಎಚ್. ಪಾಟೀಲರ ಕೊಡುಗೆ ಅಮೋಘ

■ವಿಜಯಸಾಕ್ಷಿ ಸುದ್ದಿ, ಗದಗ

ದಿ. ಕೆ.ಎಚ್. ಪಾಟೀಲರು ಸಹಕಾರಿ ರಂಗದಲ್ಲಿ ಮಾಡಿರುವ ಸೇವೆಯನ್ನು ಗುರುತಿಸಿ ಸಮಾಜವು ಅವರನ್ನು ಸಹಕಾರಿ ರಂಗದ ಭೀಷ್ಮ ಎಂದು ಗೌರವದಿಂದ ಕರೆಯುತ್ತಿದೆ. ಅವರ ಸೇವೆಯನ್ನು ಈ ನಾಡು ಮರೆತಿಲ್ಲ ಎನ್ನುವುದಕ್ಕೆ ಇಂದು ಅವರ ಜನ್ಮಶತಮಾನೋತ್ಸವವನ್ನು ಅವರ ಅಭಿಮಾನಿಗಳು ಹಾಗೂ ಗದುಗಿನ ಜನತೆ ಹೆಮ್ಮೆಯಿಂದ ಆಚರಿಸುತ್ತಿರುವುದೇ ಸಾಕ್ಷಿಯಾಗಿದೆ ಎಂದು ನಗರಸಭಾ ಹಿರಿಯ ಸದಸ್ಯ ಕೃಷ್ಣಾ ಪರಾಪೂರ ಹೇಳಿದರು.

ದಿ. ಕೆ.ಎಚ್. ಪಾಟೀಲರ ಜನ್ಮಶತಮಾನೋತ್ಸವದ ಅಂಗವಾಗಿ ಗದಗ ಜಿಲ್ಲಾ ಆಟೋ ಚಾಲಕ-ಮಾಲಕರ ಸಂಘದಿಂದ ಹಮ್ಮಿಕೊಂಡಿದ್ದ ಆಟೋಗಳ



ಬೃಹತ್ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಮನಗುಂಡಿ ಮಾತನಾಡಿ, ಗದಗ ಜಿಲ್ಲಾ ಆಟೋ ಚಾಲಕ-ಮಾಲಕರ ಸಂಘದಿಂದ ಸುಮಾರು 300ಕ್ಕೂ ಹೆಚ್ಚು ಆಟೋ ಚಾಲಕರು ತಮ್ಮ ಆಟೋಗಳ ಮೇಲೆ ದಿ. ಕೆ.ಎಚ್. ಪಾಟೀಲರರ ಫೋಟೋಗಳನ್ನು ಅಳವಡಿಸಿಕೊಂಡು ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಶ್ರೀಯುತರ ಜನ್ಮಶತಮಾನೋತ್ಸವವನ್ನು ಇತಿಹಾಸದ ಪುಟಗಳಲ್ಲಿ ಅಜರಾಮರವಾಗುವಂತೆ ಮಾಡುತ್ತಿರುವುದು ಸಂತೋಷದ ವಿಷಯವಾಗಿದೆ ಎಂದರು.

ಸಂಘದ ಜಿಲ್ಲಾಧ್ಯಕ್ಷ ವಿಜಯ ಕಲ್ಮನಿಯವರ ಮಾರ್ಗದರ್ಶನದಲ್ಲಿ ಮಂಜುನಾಥ ಅಗಸಿಮನಿ, ಗಂಗಾಧರ ಬ್ಯಾಗೋಟಿ, ಈರಣ್ಣ ಗೆಜ್ಜೆಳ್ಳಿ, ಮೋಹನ ಶಿಂಗಾಡಿ, ಉದಯ ಪನ್ನೂರ, ಹೇಮಂತ ಕಾಳೆ, ಮಲ್ಲಿಕಾರ್ಜುನ ಸಂಗಾಪೂರ, ಮಹಾದೇವ ಛಲವಾದಿ, ರಫೀಕ ಮುಳಗುಂದ, ಅಯ್ಯಪ್ಪ ಭಂಡಾರಿ, ಮೋಹನ ಛಲವಾದಿ, ಬಸವರಾಜ ಹುಲ್ಲೂರ, ನಾಗರಾಜ ಗುಳೇದಗುಡ್ಡ, ಗೋಪಾಲ ಗೋರ್ಲೆ, ಶಫಿ ಅತ್ತಾರ, ಬಸವರಾಜ ಗಾಮನಗಟ್ಟಿ, ಯಮನೂರ ಕಾಳಗಿ, ಜೀವನ್ ಪರಾಪೂರ, ಲಕ್ಷ್ಮಣ ಕಟ್ಟಿಮನಿ, ವಿಜಯೇಂದ್ರ ವಡವಿ, ರಾಜು ಮುಲ್ಲಾನವರ, ಮಂಜು ಪೂಜಾರ, ಮಂಜುನಾಥ ಬಳ್ಳಾರಿ ಸೇರಿದಂತೆ ಹೊಸ ಬಸ್ ನಿಲ್ದಾಣ, ಹಳೆ ಬಸ್ ನಿಲ್ದಾಣ, ಮುಳಗುಂದ ನಾಕಾ, ಜಿಲ್ಲಾಸ್ಪತ್ರೆ, ಗಾಂಧಿ ಸರ್ಕಲ್ ಆಟೋ ನಿಲ್ದಾಣಗಳ ಆಟೋ ಚಾಲಕರು ಭಾಗವಹಿಸಿದ್ದರು.

# ಬೂದಿಹಾಳ ಗ್ರಾಮಸ್ಥರಿಂದ ಶ್ರೀಶೈಲಕ್ಕೆ ಪಾದಯಾತ್ರೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಬೂದಿಹಾಳ ಗ್ರಾಮಸ್ಥರು ಶ್ರೀಶೈಲ ಕ್ಷೇತ್ರಕ್ಕೆ ಸತತ 23ನೇ ವರ್ಷದ ಪಾದಯಾತ್ರೆಯನ್ನು ಶುಕ್ರವಾರ ಪ್ರಾರಂಭಿಸಿದರು. ಯುಗಾದಿಯಂದು ಜರಗುವ ಮಲ್ಲಿಕಾರ್ಜುನ ಜಾತ್ರೆಯಲ್ಲಿ ಪಾಲ್ಗೊಳ್ಳಲು ನೂರಾರು ಸಂಖ್ಯೆಯ ಶಿವಭಕ್ತರು ಶ್ರೀ ಕಲ್ಮೇಶ್ವರ ಭಕ್ತಮಂಡಳಿಯೊಂದಿಗೆ 12 ದಿನಗಳ ಪಾದಯಾತ್ರೆ ಕೈಗೊಂಡರು.

ಬೂದಿಹಾಳ, ಮಾಳವಾಡ, ಕುರಹಟ್ಟಿ, ತುಪ್ಪದ ಕುರಹಟ್ಟಿ, ತೊಂಡಿಹಾಳ, ಅಬ್ಬಿಗೇರಿ, ಹಾಲಕೆರೆ, ನೀರಲಗಿ ಗ್ರಾಮ ಸೇರಿದಂತೆ ಸುತ್ತುಮುತ್ತಲಿನ ಊರುಗಳಿಂದ 100ಕ್ಕೂ ಹೆಚ್ಚು ಭಕ್ತರು ಪಾಲ್ಗೊಂಡಿದ್ದರು. ಸುದ್ದಿಗಾರರೊಂದಿಗೆ ಮಾತನಾಡಿದ



ಬಸವನಗೌಡ ಪಾಟೀಲ, ಸತತ 23 ವರ್ಷಗಳಿಂದ ಗ್ರಾಮದ ಕಲ್ಲಯ್ಯಜ್ಜ ಹಿರೇಮಠರ ನೇತೃತ್ವದಲ್ಲಿ ನಾವು ಶ್ರೀಶೈಲ ಮಲ್ಲಯ್ಯನ ಪಾದಯಾತ್ರೆ ಮಾಡುತ್ತಾ ಬಂದಿದ್ದೇವೆ ಎಂದರು.

ಪಾದಯಾತ್ರಿಕ ಕಲ್ಲಯ್ಯಜ್ಜ ಹಿರೇಮಠ ಮಾತನಾಡಿ, ಪ್ರತಿದಿನ 40ರಿಂದ 50 ಕಿ.ಮೀ.ನಂತೆ 500ಕ್ಕೂ ಹೆಚ್ಚು ಕಿ.ಮೀ. ನಡೆದು ಶ್ರೀಶೈಲ ತಲುಪಿ ದೇವರ ದರ್ಶನ ಪಡೆಯುತ್ತೇವೆ. ಕರ್ನೂಲು ದಾಟುತ್ತಿದ್ದಂತೆ ಬೆಟ್ಟ ಗುಡ್ಡಗಳ ನಡುವೆ ನಡಿಗೆ ಕಠಿಣವಾಗುತ್ತದೆ. ಇಂಥ ದುರ್ಗಮ ದಾರಿ ತುಳಿದು ಮಲ್ಲಯ್ಯನ ದರ್ಶನ ಪಡೆದು ರಥೋತ್ಸವದಲ್ಲಿ ಪಾಲ್ಗೊಳ್ಳುತ್ತಿದ್ದಂತೆ ನಡೆದು ಬಂದ ಆಯಾಸವೆಲ್ಲ ಮರೆತು ಹೋಗುತ್ತದೆ. ಮಲ್ಲಯ್ಯನ ಸೇವೆ, ನಮ್ಮ ನಂಬಿಕೆಯಿಂದ 23 ವರ್ಷಗಳಿಂದ ಯಾತ್ರೆ ನಡೆಯುತ್ತಿದೆ. ನಮಗೆ ಯಾವ ತೊಂದರೆಯಾಗಿಲ್ಲ. ಈ ಯಾತ್ರೆ ನಮ್ಮ ಭಕ್ತಿ ಸಮರ್ಪಣೆಗೊಂದು ಅವಕಾಶ ಕಲ್ಪಿಸುತ್ತದೆ ಎಂದರು.

ಪಾದಯಾತ್ರೆಯು ಬೂದಿಹಾಳ, ನಿಡಗುಂದಿ, ಗಜೇಂದ್ರಗಡ, ಕುಷ್ಟಗಿ, ಛತ್ರ, ದೇಸಾಯಿ ಭೋಗಾಪುರ, ಪೋತ್ನಾಳ ಕ್ರಾಸ್, ಕರ್ನಾಟಕದ ಕೊನೆಯ ಹಳ್ಳಿ ಜಾಹಗೀರಪನ್ನೂರ, ಆಂಧ್ರದ ಕರೆಹೊಳ್ಳಿ, ಕರ್ನೂಲ್, ಆತ್ಮಕೂರ, ವೆಂಕಟಾಪೂರ ಮಾರ್ಗವಾಗಿ ಮಾ.26ರಂದು ಶ್ರೀಶೈಲಂ ಕ್ಷೇತ್ರವನ್ನು ತಲುಪಲಿದೆ.

# ಮಹಿಳೆಗೂ ಸಿಕ್ಕಿದೆ ದೇವತೆಯ ಸ್ಥಾನ

■ವಿಜಯಸಾಕ್ಷಿ ಸುದ್ದಿ, ರೋಣ

ಸಮಾಜದಲ್ಲಿ ಮಹಿಳೆಗೂ ದೇವತೆಯ ಸ್ಥಾನಮಾನ ಸಿಕ್ಕಿದೆ. ಮಹಿಳೆ ಅಬಲೆಯಲ್ಲ, ಸಬಲೆ ಎನ್ನುವುದನ್ನು ಸಾಧನೆಯ ಮೂಲಕ ತೋರಿಸಬೇಕಿದೆ ಎಂದು ಕದಳಿ ಹಾಗೂ ಸ್ಪಂದನಾ ಮಹಿಳಾ ವೇದಿಕೆಯ ತಾಲೂಕಾಧ್ಯಕ್ಷೆ ಶಶಿಕಲಾ ಪಾಟೀಲ ಹೇಳಿದರು.

ಅವರು ರವಿವಾರ ಪಟ್ಟಣದ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಮಹಿಳೆ ತಾಯಿಯಾಗಿ,ಅಕ್ಕನಾಗಿ, ತಂಗಿಯಾಗಿ, ಮಡದಿಯಾಗಿ ತನ್ನ ಕಾರ್ಯವನ್ನು ನಿರ್ವಹಿಸುವ ಜೊತೆಗೆ ಕುಟುಂಬದ ಜವಾಬ್ದಾರಿಯನ್ನು ತೆ-ಗೆದುಕೊಂಡು ತನ್ನ ಕುಟುಂಬದ ಕೀರ್ತಿಯನ್ನು ಹೆಚ್ಚಿಸುವ ಸಲುವಾಗಿ ತನ್ನ ಜೀವನವನ್ನು ಸವೆಸುತ್ತಾಳೆ ಎಂದರು.



ಅಶ್ವಿನಿ ದೊಡ್ಡಲಿಂಗಪ್ಪನವರ ಮಾತನಾಡಿ, ಮಹಿಳೆ ಕುಟುಂಬದ ಜವಾಬ್ದಾರಿಯನ್ನು ನಿಭಾಯಿಸುವ ಜೊತೆಗೆ ಮಕ್ಕಳ ಅಕ್ಷರ ಜ್ಞಾನಕ್ಕೆ ಹೆಚ್ಚಿನ ಮಹತ್ವವನ್ನು ನೀಡಬೇಕು. ಅಂದಾಗ ಮಾತ್ರ ಕುಟುಂಬದ ಕೀರ್ತಿ ಬೆಳಗಲು ಸಾಧ್ಯ ಎಂದರು.

ಮಾತೋಶ್ರೀ ಬಸಮ್ಮ ತಾಯಿಯವರ ಸಾರ್ಥಕ ಬದುಕಿನ ಕುರಿತು ಡಾ. ಜಯಶ್ರೀ ಹೊಸಮನಿ ಉಪನ್ಯಾಸ ನೀಡಿದರು. ಹಿಳಾ ದಿನಾಚರಣೆ ಪ್ರಯುಕ್ತ ಮಹಿಳೆಯರು ತಯಾರಿಸಿದ ತಿನಿಸುಗಳು ಸೇರಿ ವಿವಿಧ ಕಲಾಕೃತಿಗಳ ಪ್ರಚಾರ ಕಾರ್ಯವನ್ನು ಹಮ್ಮಿಕೊಳ್ಳಲಾಗಿತ್ತು. ಜಾನಪದ ಗೀತೆಗಳೊಂದಿಗೆ ಬೀಸುಕಲ್ಲು ಮತ್ತು ಶಾವಿಗೆ ಹೊಸೆಯುವ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಶ್ರಮಿಕ ರೈತ ಮಹಿಳೆಯರನ್ನು ಗುರುತಿಸಿ ಗೌರವಿಸಲಾಯಿತು.

ಪುರಸಭೆ ಅಧ್ಯಕ್ಷೆ ಗೀತಾ ಮಾಡಲಗೇರಿ, ಮಂಜುಳಾ ರೇವಡಿ, ನಾಜಬೇಗಂ ಯಲಿಗಾರ, ಗೀತಾ ಯಾಳಗಿ, ಅನಸಮ್ಮ ವಾಲ್ಮೀಕಿ, ಜ್ಯೋತಿ ರಡ್ಡೇರ, ರಂಜಮ್ಮ ಮುಗುಳಿ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2021ರಲ್ಲಿ ಮುದ್ರಣಗೊಂಡು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಕನ್ನಡ, ಆಂಗ್ಲ, ಹಿಂದು ಮತ್ತು ಭಾರತೀಯ ಇತರೆ ಭಾಷಾ ಪುಸ್ತಕಗಳನ್ನು ಆಯ್ಕೆ ಸಮಿತಿ ಮುಂದೆ ಮಂಡಿಸಲಾಗಿತ್ತು. ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಪುಸ್ತಕಗಳನ್ನು ಇಲಾಖೆಯ ಜಾಲತಾಣ dpl.karnataka.gov.in ರಲ್ಲಿ ಈಗಾಗಲೇ ಪ್ರಕಟಿಸಲಾಗಿದೆ.

ಲೇಖಕರು, ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಸರಬರಾಜುದಾರರು ಸಲ್ಲಿಸಿದ ಪುಸ್ತಕಗಳ ಹೆಸರು ಪ್ರಕಾಶಕರ ಹೆಸರು, ಸರಬರಾಜುದಾರರ ಹೆಸರು, ಲೇಖಕರ ಹೆಸರು, ಪುಟ ಸಂಖ್ಯೆ , ಮುಖ ಬೆಲೆ , ನಿಗದಿತ ಬೆಲೆ, ಪುಸ್ತಕದ ಅಳತೆ ಹಾಗೂ ಇತರೆ ತಾಂತ್ರಿಕ ವ್ಯತ್ಯಾಸಗಳಿದ್ದಲ್ಲಿ ಮಾರ್ಚ್ 18 ರೊಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ.ಅಂಬೇಡ್ಕರ್ ವೀದಿ ಬೆಂಗಳೂರು-560 001 ಇಲ್ಲಿಗೆ ಲಿಖಿತವಾಗಿ ಅಥವಾ ಇ-ಮೇಲ್ ಮೂಲಕ ಮನವಿ ಸಲ್ಲಿಸಬಹುದಾಗಿದೆ ಎಂದು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಬಟ್ಟೆ ತೊಳೆಯಲು ಹೋಗಿ ಅವಘಡ: ನೀರಲ್ಲಿ ಮುಳುಗಿ ಮೂವರು ದುರ್ಮರಣ!

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಬಟ್ಟೆ ತೊಳೆಯಲು ಹೋಗಿದ್ದ ಮೂವರು ಮಹಿಳೆಯರು ನೀರಲ್ಲಿ ಮುಳುಗಿ ದುರ್ಮರಣ ಹೊಂದಿರುವ ಘಟನೆ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ಲಕ್ಕೀಸಾಗರ ಗ್ರಾಮದಲ್ಲಿ ಜರುಗಿದೆ.

28 ವರ್ಷದ ದೀಪಾ, 19 ವರ್ಷದ ಚಂದನಾ, 23 ವರ್ಷದ ದೀಪಾ ಮೃತರು. ಮಹಿಳೆಯರು ಲಕ್ಕೀ ಸಾಗರ ಗ್ರಾಮದ ಹೊಸ ಕೆರೆಯಲ್ಲಿ ಬಟ್ಟೆ ತೊಳೆಯಲು ಹೋಗಿದ್ದ ವೇಳೆ ಈ ಅವಘಡ ಸಂಭವಿಸಿದೆ. ಚನ್ನಗಿರಿ ಅಗ್ನಿಶಾಮಕ ಸಿಬ್ಬಂದಿ ಮೃತದೇಹಗಳನ್ನು ಕೆರೆಯಿಂದ ಮೇಲೆತ್ತಿದ್ದಾರೆ. ಸ್ಥಳಕ್ಕೆ ಹಲವು ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ಮಹಿಳಾ ದಿನಾಚರಣೆ

# ಮಹಿಳೆಗೆ ವಿದ್ಯೆ, ಜ್ಞಾನ ಅತ್ಯವಶ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ದಿನಗಳಲ್ಲಿ ಒಬ್ಬ ಮಹಿಳೆ ತಾನು ಬಯಸಿದ್ದನ್ನು ಸಾಧಿಸುವ ಛಲ ಮತ್ತು ಬುದ್ಧಿಶಕ್ತಿಯನ್ನು ಹೊಂದಿದ್ದಾಳೆ. ಮಗುವಿಗೆ ತಾಯಿಯ ಆರೈಕೆಯೂ ಅಮೂಲ್ಯವಾಗಿರುತ್ತದೆ. ಮಹಿಳೆ ಆತ್ಮ ಸಂರಕ್ಷಣೆ ಮಾಡಿಕೊಳ್ಳಬೇಕಾಗುತ್ತದೆ. ನಮ್ಮ ಉನ್ನತಿಯಿಂದ ನಮ್ಮಲ್ಲಿ ಪರಿವರ್ತನೆ ಆಗುತ್ತದೆ. ಆದ್ದರಿಂದ ಮಹಿಳೆಯರಿಗೆ ವಿದ್ಯೆ ಮತ್ತು ಜ್ಞಾನದ ಅವಶ್ಯಕತೆ ಇದೆ ಎಂದು ಹುಬ್ಬಳ್ಳಿಯ ನಂದು ಕೆಮಿಕಲ್ ಇಂಡಸ್ಟ್ರೀಸ್ ನಿರ್ದೇಶಕರಾದ ಉಷಾ ಹೆಗಡೆ ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ ಮಣಕವಾಡದ ಅನ್ನದಾನೀಶ್ವರ ದೇವಮಂದಿರ ಮಹಾಮಠದ ಪರಮ ಪೂಜ್ಯ ಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಮಹಿಳೆಯರು ಎಲ್ಲವನ್ನು ಸರಿದೂಗಿಸಿಕೊಂಡು ಹೋಗುವ ಶಕ್ತಿಯನ್ನು ಹೊಂದಿದ್ದಾರೆ. ಮಕ್ಕಳ ಭವಿಷ್ಯವನ್ನು ರೂಪಿಸುವುದು ತಾಯಂದಿರ ಆದ್ಯ ಕರ್ತವ್ಯವಾಗಿದೆ. ತಾಯಂದಿರು ಮೊಬೈಲ್ ಬಗ್ಗೆ ಮಹತ್ವ ಕೊಡದೇ ಮಕ್ಕಳ ಜೀವನವನ್ನು ರೂಪಿಸಬೇಕೆಂದು ತಿಳಿಸಿದರು.



ಮುಖ್ಯ ಅತಿಥಿಗಳಾಗಿ ಆಗಮಿಸಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ತಾತನಗೌಡ ಎಸ್.ಪಾಟೀಲ, ಅಧ್ಯಕ್ಷತೆ ವಹಿಸಿದ್ದ ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಮಾತನಾಡಿದರು.

ಕಾರ್ಯಕ್ರಮದ ಸಹ ಪ್ರಾಯೋಜಕತ್ವವನ್ನು ಸದಾಶಿವ್ಯಯ ಎಸ್.ಮದರಿಮಠ, ಪೂಜಾ ಭೂಮಾ, ರೇಖಾ ಚನ್ನಪ್ಪನವರ, ಸುವರ್ಣಾ ಸದಾಶಿವಯ್ಯ ಮದರಿಮಠ, ಉಮಾ ಮುನವಳ್ಳಿ, ಸುಜಾತಾ ಗುಡಿಮನಿ, ವನಜಾಕ್ಷಿ ಕೂಗು, ಲಲಿತಾ ತಡಸದ, ಭಾರತಿ ಮುದಗಲ್, ಅನಿತಾ ಗೊಡಚಿ, ಸುನೀತಾ ಗೊಡಚಿ, ಸೌಭಾಗ್ಯ ಮಹಿಳಾ ಸೌಹಾರ್ದ ಸಹಕಾರಿ ಬ್ಯಾಂಕ್, ದಿ. ಮರ್ಚಂಟ್ಸ್ ಅರ್ಬನ್ ಕೋ-ಆಪ್ ಬ್ಯಾಂಕ್, ಸುರೇಖಾ ಮಲ್ಲಾಡದ ಸೀಮಾ ಜೈನ್, ರಾಜೇಶ್ವರಿ ಪವಾರ, ಭಾಗ್ಯಶ್ರೀ ಕುರಡಗಿ, ಶ್ವೇತಾ ಖಟವಟೆ, ಆರತಿ ಭಾಂಡಗೆ, ಸಂಧ್ಯಾ ಭಾಂಡಗೆ ಪೂರ್ಣಿಮಾ ಪಾಟೀಲ, ರೇಶ್ಮಾ ಭಾರತ, ಕಸ್ತೂರಿ ತೆಲೆಗೌಡ್ರ, ಅತ್ತರಬಾನು ತಾಡಪತ್ರಿ, ಮದುಶ್ರೀ ಭದ್ರಕಾಳಮಮಠ, ಗಾಯತ್ರಿ ಭಾಂಡಗೆ, ಜ್ಯೋತಿ ಹಬೀಬ, ಸುನೀತಾ ಪಾಟೀಲ ಇವರು ವಹಿಸಿಕೊಂಡಿದ್ದರು.

ಕ್ಷಿತಿ ಸುಲಾಖೆ ಭಕ್ತಿ ಗೀತೆ ಹಾಡಿದರೆ, ಪ್ರೀತಿ ಪ್ರಾರ್ಥನೆಯನ್ನು ಮಾಡಿದರು. ನಂದಾ ಚಂದ್ರು ಬಾಳಿಹಳ್ಳಿಮಠ ಸ್ವಾಗತಿಸಿದರು. ಜ್ಯೋತಿ ಹೇರಲಗಿ ಕಾರ್ಯಕ್ರಮ ನಿರೂಪಿಸಿದರು. ಜ್ಯೋತಿ ರಾಮನಗೌಡ ದಾನಪ್ಪಗೌಡ ವಂದಿಸಿದರು.

ಕಾರ್ಯಕ್ರಮದಲ್ಲಿ ಸಾಧಕ ರೈತ ಮಹಿಳೆ ಮಂಗಳಾ ಕಿರಣ ನೀಲಗುಂದ, ಗದಗ ನಗರದ ಮುದ್ರಣ ಕ್ಷೇತ್ರದಲ್ಲಿ ಸಾಧನೆ ಮಾಡಿದ ನಂದಿನಿ ಬಸವರಾಜ ಶಾಬಾದಿಮಠ, ಬೆಟಗೇರಿ ನಗರದ ಕೂಡಲ ಸಂಗಮೇಶ್ವರ ಪ್ಯಾಕಿಂಗ್ ಇಂಡಸ್ಟ್ರೀಸ್‌ನ ನಿರ್ಮಲಾ ದಶರಥರಾಜ ಕೊಳ್ಳಿ ಹಾಗೂ ಅಳವಂಡಿ ಎಚ್.ಪಿ. ಗ್ಯಾಸ್ ವಿತರಕರಾದ ರಶ್ಮಿ ಚನ್ನಬಸವರಾಜ ಕುರಗೊಡ, ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಎಸ್.ಪಿ. ಸಂಶಿಮ್ಮಠ, ಸಂಸ್ಥೆಯ ಮಹಿಳಾ ಘಟಕದದ ಮಾಜಿ ಅಧ್ಯಕ್ಷರಾದ ಜಯಶ್ರೀ ಉಮೇಶ ಹುಬ್ಬಳ್ಳಿ, ಜಯಶ್ರೀ ತಾತನಗೌಡ ಪಾಟೀಲ ಹಾಗೂ ನಿಕಟಪೂರ್ವ ಅಧ್ಯಕ್ಷರಾದ ಸುವರ್ಣಾ ಸದಾಶಿವಯ್ಯ ಮದರಿಮಠ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಂಸ್ಥೆಯ ಮಹಿಳಾ ಘಟಕದ ಉಪಾಧ್ಯಕ್ಷರಾದ ದೀಪಾ ಗದಗ, ಸುಷ್ಮಾ ಜಾಲಿ, ಸುಜಾತಾ ಗುಡಿಮನಿ, ಲಲಿತಾ ತಡಸದ, ಸುಧಾ ಹುಣಸಿಕಟ್ಟಿ, ಪೂರ್ಣಿಮಾ ಆಟದ, ಅಶೋಕಗೌಡ ಕೆ.ಪಾಟೀಲ, ವ್ಹಿ.ಎಸ್. ಮಾಟಲದಿನ್ನಿ, ಆನಂದ ಪೊತ್ನೀಸ, ಎಸ್.ಆರ್. ನಾಲತ್ವಾಡಮಠ, ಸೋಮನಾಥ ಕೆ. ಜಾಲಿ, ವಿರೇಶ ಕೂಗು, ಚಂದ್ರು ಬಾಳಿಹಳ್ಳಿಮಠ, ಈಶ್ವರಪ್ಪ ಮುನವಳ್ಳಿ ಪಾಲ್ಗೊಂಡಿದ್ದರೆಂದು ಮಹಿಳಾ ಘಟಕದ ಗೌರವ ಕಾರ್ಯದರ್ಶಿಗಳಾದ ಜ್ಯೋತಿ ದಾನಪ್ಪಗೌಡ್ರ ತಿಳಿಸಿದ್ದಾರೆ.

# ವಿಶೇಷ ಚೇತನರಿಗಾಗಿ ವಿಶೇಷ ಕ್ಷೇತ್ರ ಭೇಟಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಮ್ಮ ಸಮಾಜದಲ್ಲಿ ವಿಶೇಷ ಚೇತನ ಮಕ್ಕಳು ಸಹ ಸಾಮಾನ್ಯ ಮಕ್ಕಳಂತೆ ಇರಬೇಕು ಎನ್ನುವ ಉದ್ದೇಶದಿಂದ ವಿಶೇಷ ಚೇತನ ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ಈ ವಿಶೇಷ ಕ್ಷೇತ್ರ ಭೇಟಿ ಉಪಯುಕ್ತವಾದ ಕಾರ್ಯಕ್ರಮವಾಗಿದೆ. ಈ ವಿದ್ಯಾರ್ಥಿಗಳೂ ಕೂಡ ಸಾಮಾನ್ಯ ವಿದ್ಯಾರ್ಥಿಗಳಂತೆ ಕಲಿಕೆಯಲ್ಲಿ ಪಾಲ್ಗೊಳ್ಳಲು ಈ ಪ್ರವಾಸ ಸಹಾಯಕವಾಗಲಿದೆ ಎಂದು ಪುರಸಭೆ ಹಿರಿಯ ಸದಸ್ಯ ರಾಜೀವ ಕುಂಬಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಹೆಣ್ಣು ಮಕ್ಕಳ



ಶಾಲೆಯಲ್ಲಿ ರವಿವಾರ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿಯಲ್ಲಿ ವಿಶೇಷ ಚೇತನ ಮಕ್ಕಳಿಗಾಗಿ ಕ್ರೀಡೆ ಮತ್ತು ಅರಿವು ಮೂಡಿಸುವ ಹಾಗೂ ಕ್ಷೇತ್ರ ಭೇಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಾರ್ಯಕ್ರಮದ ಗುರಿ ಹಾಗೂ ಉದ್ದೇಶಗಳ ಕುರಿತು ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ ಮಾತನಾಡಿದರು. ಬಿಆರ್‌ಪಿ ಈಶ್ವರ ಮೆಡ್ಲೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಸರಕಾರಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಪ್ರಧಾನ ಕಾರ್ಯದರ್ಶಿ ಚಂದ್ರು ನೇಕಾರ, ಉಪಾಧ್ಯಕ್ಷೆ ಎಲ್.ಎ. ನಂದೆಣ್ಣವರ, ವಿಕಲಚೇತನರ ನೌಕರರ ಸಂಘದ ಜಿಲ್ಲಾಧ್ಯಕ್ಷ ಆರ್.ಎಮ್. ಶಿರಹಟ್ಟಿ, ಬಿಆರ್‌ಪಿ ಬಿ.ಎಮ್. ಯರಗುಪ್ಪಿ, ಸಿಆರ್‌ಪಿಗಳಾದ ಸತೀಶ ಬೋಮಲೆ, ಉಮೇಶ ನೇಕಾರ, ಮುಖ್ಯ ಶಿಕ್ಷಕರಾದ ಬಿ.ಎಮ್. ಕುಂಬಾರ, ಡಿ.ಎನ್. ದೊಡ್ಡಮನಿ, ಎಸ್.ಬಿ. ಲಕ್ಷ್ಮೇಶ್ವರ, ವಿ.ಎನ್. ಪಾಟೀಲ, ಶಶಿಧರ ಚಳಗೇರಿ, ನಿತ್ಯಾನಂದ ವಿರೇಶಮಠ ಹಾಗೂ ಶಿರಹಟ್ಟಿ ತಾಲೂಕಿನ ಎಲ್ಲಾ ಬಿಆಯ್‌ಇಆರ್‌ಟಿಗಳು ಹಾಜರಿದ್ದರು. ನಾಗರಾಜ ಮಜ್ಜಿಗುಡ್ಡ ವಂದಿಸಿದರು.

# ಛಾವಣಿ ಕುಸಿದು ಆಕಳು ಸಾವು

■ವಿಜಯಸಾಕ್ಷಿ ಸುದ್ದಿ, ಡಂಬಳ

ಸಮೀಪದ ಡೋಣಿ ಗ್ರಾಮದಲ್ಲಿ ಸೋಮವಾರ ಬೆಳ್ಳಂ ಬೆಳಗ್ಗೆ ಮಹದೇವಪ್ಪ ಕುಲಕರ್ಣಿಯವರ ಮೇಲ್ಛಾವಣಿ ಕುಸಿದ ಪರಿಣಾಮ ಒಂದು ಆಕಳು ಸಾವನ್ನಪ್ಪಿದ್ದು, ಘಟನೆಯಲ್ಲಿ ಪವಾಡ ಸದೃಶ ಎಂಬಂತೆ ಮನೆಯಲ್ಲಿದ್ದ ಮಹದೇವಪ್ಪ, ಪತ್ನಿ ಲಲಿತಮ್ಮ ಮಕ್ಕಳಾದ ಪ್ರಶಾಂತ, ಶಂಕ್ರು ಬಚಾವ್ ಆಗಿದ್ದಾರೆ.

ಆದರೆ ಮನೆಯಲ್ಲಿ ಕಟ್ಟಿದ್ದ ಎರಡು ಹಸುಗಳಲ್ಲಿ ಒಂದು ಹಸು ಸಾವನ್ನಪ್ಪಿದರೆ ಇನ್ನೊಂದು ಹಸು ಪ್ರಾಣಾಪಾಯದಿಂದ ಪಾರಾಗಿದೆ.



ಏಕಾಏಕಿ ಮೇಲ್ಛಾವಣಿ ಕುಸಿದ ಹಿನ್ನೆಲೆಯಲ್ಲಿ ಒಳಗಿದ್ದವರು ಹೊರಗೆ ಓಡಿ ಬಂದು ಪಾರಾಗಿದ್ದಾರೆ.

ಘಟನೆಯಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಮನೆ ಹಾನಿಯಾಗಿದ್ದು, ಮನೆ ಹಾನಿ ಕಂಡು ಕುಟುಂಬಸ್ಥರು ಕಣ್ಣೀರು ಹಾಕುವಂತಾಗಿದೆ. ಸ್ಥಳಕ್ಕೆ ಕಂದಾಯ ಅಧಿಕಾರಿ ಪ್ರಭು ಭಾಗಲಿ, ಗ್ರಾಮ ಆಡಳಿತಾಧಿಕಾರಿ ಗೀತಾ, ಪಶು ವೈದ್ಯ, ಪಿಡಿಓ, ಪಂಚಾಯತ್ ಸಿಬ್ಬಂದಿ ವರ್ಗ, ಪೊಲೀಸರು ಭೇಟಿ ನೀಡಿ ಪರಿಶಿಲನೆ ನಡೆಸಿದರು. ಮುಂಡರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ.

# ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರೋತ್ಸಾಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಗೆ ಪ್ರೋತ್ಸಾಹ ನೀಡಿ ಅವರಿಗೆ ಇನ್ನಷ್ಟು ಸ್ಫೂರ್ತಿ ತುಂಬುವ ಕಾರ್ಯ ಗದುಗಿನ ಜೇಂಟ್ಸ್ ಗ್ರೂಪ್ ಆಫ್ ಸಖಿ-ಸಹೇಲಿ ಸಂಘಟನೆಯಿಂದ ನಡೆಯಲಿದೆ ಎಂದು ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಬೇಟಿ ಬಚಾವೋ-ಬೇಟಿ ಪಡಾವೋ ಕಾರ್ಯಕ್ರಮದನ್ವಯ ಗದುಗಿನ ಸರ್ಕಾರಿ ಶಾಲೆ ನಂ.19ರ ಪ್ರತಿಭಾನ್ವಿತ ವಿದ್ಯಾರ್ಥಿನಿ ಸೌಮ್ಯಾ ಸಿದ್ದೀಗೇರಿ ಇವಳನ್ನು ಸನ್ಮಾನಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಮುದಾಯಗಳು ಕೈಜೋಡಿಸಬೇಕು. ಪ್ರತಿಭಾನ್ವಿತ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ನಾವೆಲ್ಲರೂ ಸಹಾಯ ಮಾಡಬೇಕು. ಮಕ್ಕಳ ಓದು-ಬರಹಕ್ಕೆ ಪೂರಕವಾಗಿ ಬರವಣಿಗೆ ಸಾಮಗ್ರಿಗಳನ್ನು ಇಂದು ವಿತರಿಸಲಾಗುತ್ತಿದೆ ಎಂದರು.

ಮಾಧುರಿ ಮಾಳೆಕೊಪ್ಪ




ಪ್ರಾಸ್ತಾವಿಕವಾಗಿ ಮಾತನಾಡಿ, ಬಡ ಹಾಗೂ ಪ್ರತಿಭಾನ್ವಿತ ಮಕ್ಕಳನ್ನು ದತ್ತು ಪಡೆದು ಅವರಿಗೆ ಪ್ರೋತ್ಸಾಹ ನೀಡುವಲ್ಲಿ ನಮ್ಮ ಸಂಘಟನೆ ಶ್ರಮಿಸುತ್ತಿದೆ ಎಂದು ಹೇಳಿದರು.

ಶಶಿಕಲಾ ಮಾಲಿಪಾಟೀಲ ಸ್ವಾಗತಿಸಿದರು. ಜ್ಯೋತಿ ಭರಮಗೌಡ್ರ ವಂದಿಸಿದರು. ಕಾರ್ಯಕ್ರಮದಲ್ಲಿ ಕವಿತಾ ದಂಡಿನ, ಮಂಗಲಾ ಬನ್ನಿಮಟ್ಟಿ, ಅನುರಾದಾ ಬಸವಾ, ಸಾಗರಿಕಾ ಅಕ್ಕಿ, ನಿರ್ಮಲಾ ಪಾಟೀಲ, ಸುಗ್ಗಲಾ ಯಳಮಲಿ, ರೇಖಾ ರೊಟ್ಟಿ, ಶಾಂತಾದೇವಿ ತುಪ್ಪದ, ಸುಶ್ಮಿತಾ ವೇರ್ಣೆಕರ, ವಿದ್ಯಾ ಶಿವನಗುತ್ತಿ, ಅನುರಾಧಾ ಅಮತ್ಯಾಗೌಡ್ರ, ಮಂಜುಳಾ ಹಪ್ಪಗತ್ತಿ, ಅಶ್ವಿನಿ ಮದಗುಂಡಿ, ಚಂದ್ರಕಲಾ ಸ್ಥಾವರಮಠ, ಪ್ರಿಯಾಂಕಾ ಹಳ್ಳಿ ಮುಂತಾದವರು ಉಪಸ್ಥಿತರಿದ್ದರು.

## ಸೂಲಿಬೆಲೆ ವಿರುದ್ಧ ಉಳ್ಳಾಲ ಪೊಲೀಸ್ ಠಾಣೆಯಲ್ಲಿ FIR ದಾಖಲು..!

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಪ್ರಚೋದನಕಾರಿ ಭಾಷಣ ಮಾಡಿ, ಕೋಮು ದ್ವೇಷಕ್ಕೆ ಕಾರಣರಾಗಿದ್ದಾರೆ ಎಂದು ಆರೋಪಿಸಿ ಚಿಂತಕ ಚಕ್ರವರ್ತಿ ಸೂಲಿಬೆಲೆ ವಿರುದ್ಧ ಉಳ್ಳಾಲ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ.

ಮಾರ್ಚ್ 9ರಂದು ಕುತ್ತಾರು ಕೊರಗಜ್ಜ ಕ್ಷೇತ್ರದಲ್ಲಿ ಪಾದಯಾತ್ರೆಯ ಸಮಾರೋಪ ಕಾರ್ಯಕ್ರಮದಲ್ಲಿ ಸೂಲಿಬೆಲೆ ಅವರು ಅನ್ಯ ಸಮಾಜದವರನ್ನು ಪ್ರೀತಿಸಿ ಮದುವೆಯಾಗಿ ಎಂದು ಭಾಷಣ ಮಾಡಿದ ಹಿನ್ನೆಲೆಯಲ್ಲಿ, ಪ್ರಚೋದನಕಾರಿ ಭಾಷಣ ಮಾಡಿ, ಕೋಮು ದ್ವೇಷಕ್ಕೆ ಕಾರಣರಾಗಿದ್ದಾರೆ ಎಂದು ಆರೋಪಿಸಿ ಸ್ಥಳೀಯ ಮುಖಂಡ ರಶೀದ್ ಉಳ್ಳಾಲ ಠಾಣೆಗೆ ದೂರು ನೀಡಿದ್ದರು.

ದೂರಿನ ಹಿನ್ನೆಲೆ ಉಳ್ಳಾಲ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

# ಮಹಿಳೆಯರು ಆರ್ಥಿಕ ಸದೃಢತೆ ಹೊಂದಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರು ಆರ್ಥಿಕ ಸದೃಢತೆ ಹೊಂದಿ ಬದುಕನ್ನು ಗಟ್ಟಿಗೊಳಿಸಿಕೊಂಡು ಜೀವನದಲ್ಲಿ ಮುನ್ನಡೆಯಬೇಕು ಎಂದು ಮಹಿಳಾ ಉದ್ಯಮಿ ಡಾ. ಜಯಶ್ರೀ ಹಿರೇಮಠ ಹೇಳಿದರು. ಅವರು ರವಿವಾರ ಗದಗ ಜಿಲ್ಲಾ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಸಾಧಕ ಮಹಿಳೆಯರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಮಹಿಳೆಯರು ಗೃಹ ಕೈಗಾರಿಕೆಯತ್ತ ಚಿತ್ತ ಹರಿಸಿ ಬದುಕನ್ನು ಹಸನುಗೊಳಿಸಬೇಕು. ಸರ್ಕಾರವು ಮಹಿಳೆಯರಿಗಾಗಿ ಹಲವಾರು ಯೋಜನೆಗಳನ್ನು ರೂಪಿಸಿದ್ದು, ಅವುಗಳ



ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಅತಿಥಿಯಾಗಿ ಆಗಮಿಸಿದ್ದ ಜೇಂಟ್ಸ್ ಗ್ರುಪ್ ಆಫ್ ಸಖಿ-ಸಹೇಲಿ ಗದಗ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ಮಹಿಳೆಯರು ಹಿಡಿದ ಕೆಲಸ ಸಾಧಿಸುವಲ್ಲಿ ಸಮರ್ಥರು. ನಿಷ್ಠೆಯಿಂದ ಕಾರ್ಯನಿರ್ವಹಿಸಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹೆಸರಾಂತ ಮಹಿಳಾ ಸಾಧಕಿಯರು ನಮಗೆ ಆದರ್ಶರಾಗಿದ್ದಾರೆ ಎಂದರು.

ಪ್ರಾಸ್ತಾವಿಕವಾಗಿ ಚಿಂತಕಿ ಕವಿತಾ ದಂಡಿನ ಮಾತನಾಡಿ, ಮಹಿಳಾ ಸಬಲೀಕರಣ ಅತ್ಯಂತ ಅವಶ್ಯವಾಗಿದ್ದು, ಶರಣೆ ಅಕ್ಕಮಹಾದೇವಿ ಮಹಿಳಾ ಕುಲಕ್ಕೆ ಕೀರ್ತಿಪ್ರಾಯಳಾಗಿದ್ದಾಳೆ. ಶರಣ ಸಂತತಿಯಲ್ಲಿ ಮನ್ನಣೆ ಪಡೆದು ಅವರಿಂದ ಪ್ರೋತ್ಸಾಹಿಸಲ್ಪಟ್ಟು ಮೊದಲ ಕವಿಯತ್ರಿ ಎನಿಸಿಕೊಂಡಳು ಎಂದರು.

ಪುಷ್ಪಾ ಮುನವಳ್ಳಿ ಪ್ರಾರ್ಥಿಸಿದರು. ಕಾವ್ಯ ದಂಡಿನ ಸ್ವಾಗತಿಸಿದರು. ಲಲಿತಾ ಸಂಗನಾಳ ಪರಿಚಯಿಸಿದರು. ಉಷಾ ನಾಲ್ವಾಡ ನಿರೂಪಿಸಿದರು. ಕೊನೆಯಲ್ಲಿ ರಶ್ಮಿಕಾ ಹಿರೇಮಠ ವಂದಿಸಿದರು. ಕಾರ್ಯಕ್ರಮದಲ್ಲಿ ತಸ್ಲೀಮ ಸೊರಟೂರ, ಗೀತಾ ಚವ್ಹಾಣ್, ಯಮನವ್ವ ಕಟ್ಟಿಮನಿ, ಮಂಜುಳಾ ಸಂಕನಗೌಡ್ರ, ವಿಜಯಲಕ್ಷ್ಮೀ ಭೈರವಾಡೆ, ಅಶ್ವಿನಿ ಮ್ಯಾಗಲಮನಿ, ಸುಜಾತಾ ಗುರುಜಾಲಕರ, ಸಂಜನಾ ಪವಾಡಶೆಟ್ಟರ, ಖುಷಿ ಮೇಹರವಾಡೆ, ಐಶ್ವರ್ಯ ಪಾಟೀಲ, ಮೇಘಾ ಹೂಗಾರ, ಸಂಗೀತಾ ಪಾಟೀಲ, ಅಶ್ವಿನಿ ಭೋಜಕರ, ಸಂಧ್ಯಾ ಕುಲಕರ್ಣಿ, ನಿರ್ಮಿತಾ ಜೋಗರ ಮುಂತಾದವರಿದ್ದರು.

### ವಿಶ್ವ ಹಿಂದೂ ಪರಿಷದ್ ಲಕ್ಷ್ಮೇಶ್ವರ ಪ್ರಖಂಡದಿಂದ ಧರ್ಮ ರಕ್ಷಾನಿಧಿ ಸಮರ್ಪಣೆ

# ಎಲ್ಲರೂ ಒಂದು ಎಂದು ಬಾಳಬೇಕಾಗಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದಲ್ಲಿ ಕಳೆದ 60 ವರ್ಷಗಳಿಂದ ಹಿಂದೂ ಸಮಾಜವನ್ನು ಜಾಗೃತಗೊಳಿಸುವ ಕಾರ್ಯವನ್ನು ವಿಶ್ವ ಹಿಂದೂ ಪರಿಷತ್ ಮಾಡುತ್ತಿದೆ ಎಂದು ವಿ.ಹಿಂ.ಪ ಧಾರ್ಮಿಕ ಪುಂಜದ ಕ್ಷೇತ್ರೀಯ ಪ್ರಮುಖ ಬಸವರಾಜ ಜಿ ಹೇಳಿದರು.

ಅವರು ರವಿವಾರ ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ವಿಶ್ವ ಹಿಂದೂ ಪರಿಷದ್ ಲಕ್ಷ್ಮೇಶ್ವರ ಪ್ರಖಂಡದಿಂದ ಧರ್ಮ ರಕ್ಷಾನಿಧಿ ಸಮರ್ಪಣೆ ಹಾಗೂ ಮಹಾ ಕುಂಭಮೇಳ ದರ್ಶನಾರ್ಥಿ ಬಂಧುಗಳಿಗೆ ಗೌರವ ಸಮರ್ಪಣೆ ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಪಾಲ್ಗೊಂಡು ಮಾತನಾಡಿದರು.

ಗಂಗಾ, ಯಮುನಾ, ಸರಸ್ವತಿ ನದಿಗಳು ಸೇರುವ ತ್ರಿವೇಣಿ ಸಂಗಮವೇ ಪ್ರಯಾಗರಾಜ. 144 ವರ್ಷಕೊಮ್ಮೆ ನಡೆಯುವ ಮಹಾಕುಂಭಮೇಳದಲ್ಲಿ ಶ್ರೀಮಂತ, ಬಡವ, ಜಾತಿಯ ಭೇದ ಭಾವವಿಲ್ಲದೆ, ನಾವೆಲ್ಲರೂ ಹಿಂದೂಗಳು ಒಂದು ಎಂಬ ಭಾವದಿಂದ ಪವಿತ್ರ ಸ್ನಾನ ಮಾಡಿದ್ದಾರೆ. ಹಿಂದೂಗಳಲ್ಲಿ ಒಗ್ಗಟಿನ ಕೊರತೆ ಕಾಡುತ್ತಿದ್ದು, ಎಲ್ಲರೂ ಒಂದು ಎಂದು ಬಾಳಬೇಕಾಗಿದೆ. ಪ್ರತಿಯೊಬ್ಬ ಹಿಂದೂ ತಾನು ದುಡಿದ ದುಡ್ಡಿನಲ್ಲಿ ಸ್ವಲ್ಪವಾದರೂ ಹಿಂದೂ ಧರ್ಮ ರಕ್ಷಣೆಗೆ ಸಮರ್ಪಣೆ ಮಾಡಬೇಕು. ಅನ್ಯ ಧರ್ಮೀಯ ಯುವಕರು ಪ್ರೀತಿ ಹೆಸರಲ್ಲಿ ಹಿಂದೂ ಧರ್ಮದ ಹುಡುಗಿಯರನ್ನು ಬಲೆಗೆ ಬೀಳಿಸಿಕೊಳ್ಳುತ್ತಿದ್ದು, ಅದನ್ನು ತಡೆಯುವ ಕೆಲಸ ವಿಹಿಂಪ ಮಾಡುತ್ತಿದೆ ಎಂದು ಹೇಳಿದರು.



ವಿಹಿಂಪ ಜಿಲ್ಲಾ ಉಪಾಧ್ಯಕ್ಷೆ ರಾಣಿ ಚಂದಾವರಿ ಮಾತನಾಡಿ, ಹೆಣ್ಣುಮಕ್ಕಳು ಹಿಂದೂ ಧರ್ಮ ರಕ್ಷಣೆಗೆ ಸನ್ನದ್ಧರಾಗಿರಬೇಕು. ಯುವತಿಯರು ಅನ್ಯ ಧರ್ಮೀಯ ಯುವಕರ ಪ್ರೀತಿಯ ಮೋಸದ ಜಾಲಕ್ಕೆ ಬೀಳದಿರಿ ಎಂದು ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಲಕ್ಷ್ಮೇಶ್ವರ ಕರೆವಡಿಮಠದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಹಿಂದೂಗಳು ಮಕ್ಕಳಲ್ಲಿ ಉತ್ತಮ ಶಿಕ್ಷಣವನ್ನು, ಕೊಡಿಸುವದರ ಜೊತೆಗೆ ಸಂಸ್ಕಾರ ಬೆಳೆಸಬೇಕು ಎಂದರು

ವಿ.ಹಿಂ.ಪ ಪ್ರಖಂಡ ಪಾಲಕ ಪ್ರೊ. ಯಶವಂತರಾವ್ ಕಾಂಬಳೇಕರ ಪ್ರಾಸ್ತಾವಿಕವಾಗಿ ಮಾತನಾಡಿದರು, ಬಸವೇಶ ಮಹಾಂತಶೆಟ್ಟರ ಅಧ್ಯಕ್ಷತೆ ವಹಿಸಿದ್ದರು. ಇದೇ ವೇಳೆ ಪಟ್ಟಣದ 300ಕ್ಕೂ ಹೆಚ್ಚು ಮಹಾಕುಂಂಮೇಳ ದರ್ಶನಾರ್ಥಿಗಳಿಗೆ ಗೌರವ ಸಮರ್ಪಣೆ ಕಾರ್ಯಕ್ರಮ ಹಾಗೂ ಧರ್ಮರಕ್ಷಾ ನಿಧಿ ಸಮರ್ಪಣೆ ನಡೆಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಮಾರುತಿ ಪವಾರ, ಜ್ಞಾನೋಬಾ ಬೋಮಲೆ, ಮಲ್ಲನಗೌಡ ಪಾಟೀಲ್, ವಿನಯ ಪಾಟೀಲ್, ರಾಜು ಗುಡಗೇರಿ, ರಾಘವೇಂದ್ರ ಪೂಜಾರ, ಶಿವಣ್ಣ ಗಿಡಿಬಿಡಿ, ಎಮ್. ಎಮ್. ಖಂಡೋಜಿ, ಪ್ರಕಾಶ ಮೇವುಂಡಿ, ಎನ್. ಎಮ್. ಬಾಡಗಿ, ಎನ್.ಆರ್. ಇನಾಮತಿ, ಶಿವಪ್ಪ ಡಂಬಳ, ಸುನೀಲ ಮೆಡ್ಲೇರಿ ಇದ್ದರು. ತಾಲೂಕಾಧ್ಯಕ್ಷ ಬಸವರಾಜ ಅರಳಿ ಸ್ವಾಗತಿಸಿದರು, ರವಿ ಲಿಂಗಶೆಟ್ಟಿ ನಿರೂಪಿಸಿದರು. ಚಿಕ್ಕಣ್ಣ ಪೂಜಾರ ವಂದಿಸಿದರು.



ಕಾಮನ ಬಿಲ್ಲು ಬಣ್ಣ ಬಣ್ಣದ ಮನಸ್ಸಿಗೆ ಸ್ಫೂರ್ತಿ ನೀ ಮಳೆಬಿಲ್ಲೆ.. ಬಣ್ಣ ಬಣ್ಣದ ಕನಸ್ಸಿಗೆ ಸ್ಫೂರ್ತಿ ನೀ ಕಾಮನಬಿಲ್ಲೆ.. ವರುಣನ ಜೊತೆ ಜಗಳವಾಡಿ ಬಂದೆಯೋ? ಸಂಜೆಯ ಎಳೆ ಬಿಸಿಲ ಸ್ನೇಹಕ್ಕಾಗಿ ಬಂದೆಯೋ?

ಅದೆಂತ ಸಂಭ್ರಮ ನಿನ್ನ ನೋಡಲು, ಹಾ । ಮಕ್ಕಳಿಗೋ ನಿಸರ್ಗದ ವಿಸ್ಮಯದಂತೆ, ಕವಿಗಳಿಗೋ ಬಣ್ಣಿಸಲು ಸುಂದರ ಭಾವದಂತೆ, ವಿಜ್ಞಾನಿಗಳಿಗೋ ಅನ್ವೇಷಣೆಯ ನಿಯಮದಂತೆ, ನನಗೋ ಆಸೆ ತೋರಿ ಕೈಗೆಟುಕದ ಕಮಾಲಿನಂತೆ.

ವರ್ಣರಂಜಿತವಾಗಿ ಕಣ್ಣುಗಳಿಗೆ ತಂದೆ ಸಿರಿ,
ತುಸು ಹೊತ್ತು ಬಂದು ಹೋದೆ ಸರಿ ..
ನಿನ್ನಂತೆಯೇ ಜನರ ಪಾಡು ಆಗಿದೆ ಈ ಪರಿ.

ಕೆಲವರು ಸಂಭ್ರಮಿಸುತಿಹರು ನೋವಿಲ್ಲದಂತೆ ಕೆಂಪು, ಹಸಿರು, ನೀಲಿ ನೀಲಿಯಾಗಿ.. ಕೆಲವರದೋ ಆಗಿದೆ ಮೌನದ ಬದುಕಂತೆ ಹಳದಿ ಹಳದಿಯಾಗಿ...

ಕೆವರದೋ ಬರೀ ಆಕರ್ಷಣೆಯ ಬದುಕಂತೆ ಕಿತ್ತಳೆ ಬಣ್ಣದ ಚಲುವಾಗಿ... ಕೆಲವರದು ಮುಸುಕಿದ ಮಸಿಯಂತೆ, ಊದು ನೀಲಿಯ ಬೂದು ಬಣ್ಣವಾಗಿ.. ನಮ್ಮದೋ ಆಗೊಮ್ಮೆ ಈಗೊಮ್ಮೆ ನಗುವಂತೆ ನೇರಳೆ ಬಣ್ಣದ ನೇರಳೆ ಹಣ್ಣಾಗಿ...

**ಪವಿತ್ರ ಬಡಿಗೇರ್**
**ಜಗಳೂರು**

**ಕಲಬುರಗಿ ಶರಣ ಬಸವೇಶ್ವರರ 47ನೇ ವರ್ಷದ ಪುರಾಣ ಪ್ರಾರಂಭೋತ್ಸವದಲ್ಲಿ ಶಂಕರಾನಂದ ಸ್ವಾಮೀಜಿ**

# ಸಂಸ್ಕಾರ, ಶಿಕ್ಷಣದಿಂದ ಮಾನಸಿಕ ಶಾಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾನವನ ಸರ್ವತೋಮುಖಿ ಬೆಳವಣಿಗೆಗೆ ಶಿಕ್ಷಣ ಬಹು ಮುಖ್ಯವಾಗಿದ್ದು, ಶಿಕ್ಷಣದ ಜೊತೆ-ಗೆ ಸಂಸ್ಕಾರ ಅವಶ್ಯವಾಗಿದೆ. ಪಾಲಕ ಸಮುದಾಯ ಶಿಕ್ಷಣ ಜೊತೆಗೆ ಸಂಸ್ಕಾರವನ್ನು ಕಲಿಸುವಲ್ಲಿ ಹೆಚ್ಚಿನ ಆದ್ಯತೆ ನೀಡಬೇಕಿದೆ. ಸಂಸ್ಕಾರ, ಶಿಕ್ಷಣದ ಮೂಲಕ ಜೀವನದಲ್ಲಿ ಮಾನಸಿಕ ಶಾಂತಿ ಗಳಿಸಲು ಸಾಧ್ಯ ಎಂದು ಸದ್ಗುರು ಮುಕ್ಕಣ್ಣೇಶ್ವರ ಮಠದ ಶಂಕರಾನಂದ ಸ್ವಾಮಿಗಳು ಹೇಳಿದರು.

ನಗರದ ಶಹಪೂರ ಪೇಟೆಯ ಶ್ರೀ ಕಟ್ಟಿ ಬಸವೇಶ್ವರ ಸಮುದಾಯ ಭವನ ಟ್ರಸ್ಟ್ ಹಾಗೂ ಶ್ರೀ ಕಟ್ಟಿ ಬಸವೇಶ್ವರ ದೇವಸ್ಥಾನ ಸಹಯೋಗದಲ್ಲಿ ಮಾ.16ರಿಂದ 30ರವರೆಗೆ ನಡೆಯಲಿರುವ ಶ್ರೀ ಮಹಾದಾಸೋಹಿ ಕಲಬುರಗಿ ಶರಣ ಬಸವೇಶ್ವರರ 47ನೇ ವರ್ಷದ ಪುರಾಣ ಪ್ರಾರಂಭೋತ್ಸವ ಧಾರ್ಮಿಕ ಸಮಾರಂಭವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಇಂದಿನ ಬದುಕಿನಲ್ಲಿ ಸತ್ಯ, ಪ್ರಾಮಾಣಿಕತೆ, ಧರ್ಮ, ನ್ಯಾಯ-ನೀತಿಗಳ ಮೌಲ್ಯಗಳು ಅವಶ್ಯಕವಾಗಿವೆ. ಈ ಮೌಲ್ಯಗಳನ್ನು ಸಂಸ್ಕಾರದಿಂದ ಕಲಿಯಲು ಸಾಧ್ಯ. ಈ ನೈತಿಕ ಮೌಲ್ಯದಿಂದ ಸುಂದರ ಬದುಕು ಕಟ್ಟಿಕೊಂಡು ಮುಂದಿನ ಪಿಳಿಗೆಗೆ ದಾರಿದೀಪವಾಗಬಹುದು. ವಿಶ್ವಾದ್ಯಂತ ಅನೇಕ ದಾರ್ಶನಿಕರು, ಸಂತರು, ಶರಣರು ತಮ್ಮ ತಪಸ್ಸು ಶಕ್ತಿಯ ಮೂಲಕ ಇಂದಿಗೂ ಜೀವಂತವಾಗಿದ್ದಾರೆ, ಲೋಕ ಕಲ್ಯಾಣ ಕಾರ್ಯದಿಂದ ಸ್ಮರಣೀಯರಾಗಿದ್ದಾರೆ. ಪರಿವಾರದ ಹಿರಿಯ ತಲೆಮಾರಿನ ಹೆಸರುಗಳನ್ನು ಮರೆತ ನಮಗೆ ಸಾಧು, ಸಂತ ಮತ್ತು ಶರಣರ ಹೆಸರು ನಿರಂತರ ಸ್ಮರಣೆಯಲ್ಲಿದೆ ಎಂದರೆ ಅವರ ಜೀವಮಾನ ಸಾಧನೆಯೇ ಇದಕ್ಕೆ ಕಾರಣವಾಗಿದೆ ಎಂದರು.



ನಗರಸಭಾ ಸದಸ್ಯ ಚಂದ್ರಶೇಖರ ತಡಸದ ಸಾಂದರ್ಭಿಕವಾಗಿ ಮಾತನಾಡಿದರು.

ವೇ.ಮೂ. ಬಸಯ್ಯ ಶಾಸ್ತ್ರಿಗಳು ಹಿರೇಮಠ, ಜಗನ್ನಾಥ ಶಿಂದಗಿ, ಅಪ್ಪಣ್ಣ ಕುಡತಿನಿ, ನಿವೃತ್ತ ಉಪನ್ಯಾಸಕರಾದ ಅನಿಲ ವೈದ್ಯ, ಶ್ರೀ ಕಟ್ಟಿ ಬಸವೇಶ್ವರ ಸಮುದಾಯ ಭವನ ಟ್ರಸ್ಟ್ ಅಧ್ಯಕ್ಷರಾದ ಮಲ್ಲಿಕಾರ್ಜುನ ರಂಗಪ್ಪ ಹೂಗಾರ, ಶಂಭುಲಿಂಗಪ್ಪ ವಿ.ಕಾರದಕಟ್ಟಿ, ಭೀಮರೆಡ್ಡಿ ಕಿಲಬನವರ, ಸಂತೋಷ ಕುಡತರಕರ, ನರಸಿಂಹ ಕುಡತರಕರ, ಈಶ್ವರಪ್ಪ ಗಡಾದ, ನಿರ್ಮಲಾ ಕರಸಿದ್ದಿಮಠ, ನಾಗಪ್ಪ ಗಡಾದ, ಮುತ್ತು ಕಾರದಕಟ್ಟಿ, ಶ್ರೀ ಮಹಾದಾಸೋಹಿ ಕಲಬುರಗಿ ಶರಣ ಬಸವೇಶ್ವರರ ಪುರಾಣ ಸಮಿತಿಯ ಅಧ್ಯಕ್ಷರು ಮತ್ತು ಕೋಶಾಧ್ಯಕ್ಷರಾದ ಮಾರುತಿ ಮದಗುಣಕಿ, ಉಪಾಧ್ಯಕ್ಷ ಶಿವನಗೌಡ ಆಡೂರ, ಕಿರಣ ಎಸ್.ಗಡಾದ, ಕಾರ್ಯದರ್ಶಿ ವೀರೇಂದ್ರ ಮಣ್ಣನವರ, ಕಾರ್ಯಕ್ರಮದ ಆಯೋಜಕರಾದ ಗಂಗಾಧರ ಅ.ಗಡಾದ, ಶಂಕರ ಈ.ಗಡಾದ ಮುಂತಾದವರಿದ್ದರು.

> ಶ್ರೀ ಕಟ್ಟಿ ಬಸವೇಶ್ವರ ಸಮುದಾಯ ಭವನ ಟ್ರಸ್ಟ್ ಹಾಗೂ ಶ್ರೀ ಕಟ್ಟಿ ಬಸವೇಶ್ವರ ದೇವಸ್ಥಾನ ಸಹಯೋಗದಲ್ಲಿ ಶ್ರೀ ಮಹಾದಾಸೋಹಿ ಕಲಬುರಗಿ ಶರಣ ಬಸವೇಶ್ವರರ ಕಳೆದ 47 ವರ್ಷದಿಂದ ಪುರಾಣ ಪ್ರವಚನ ಧಾರ್ಮಿಕ ಕಾರ್ಯ ನಿರಂತರವಾಗಿ ನಡೆಯಲು ದಾನಿಗಳ ಸಹಕಾರ ಬಹು ಮುಖ್ಯವಾಗಿದ್ದು, ಅಂತಹ ಪುಣ್ಯಾತ್ಮರ ಸಹಕಾರ ಮತ್ತು ಪ್ರೋತ್ಸಾಹದಿಂದ ಬಹು ವರ್ಷಗಳಿಂದ ಪುರಾಣ ಪ್ರವಚನ ಯಶಸ್ವಿಯಾಗಿ ನಡೆಯುತ್ತಿರುವದು ಸಂತಸ ವಿಚಾರವಾಗಿದೆ. ಯುವ ಪೀಳಿಗೆ ಹಿರಿಯರು ಹಾಕಿರುವ ಸಂಸ್ಕೃತಿಯನ್ನು ಮುಂದಿನ ತಲೆಮಾರಿಗೆ ತಲುಪಿಸುವ ಮಹತ್ತರವಾದ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕಿದೆ.
>
> **– ಶ್ರೀ ಶಂಕರಾನಂದ ಸ್ವಾಮಿಗಳು.**
> **ಸದ್ಗುರು ಮುಕ್ಕಣ್ಣೇಶ್ವರ ಮಠ.**

# ಪಡಿತರ ಚೀಟಿದಾರರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದಂತೆ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಪ್ರಸ್ತುತ ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ನೇರ ನಗದು ಹಣ ವರ್ಗಾವಣೆ (ಡಿಬಿಟಿ) ಮುಖಾಂತರ ಹಣವನ್ನು ವರ್ಗಾಯಿಸುವ ಪ್ರಕ್ರಿಯೆ ಬದಲಾಗಿ ಫೆಬ್ರವರಿ –2025 ರ ತಿಂಗಳಿನಿಂದ ಜಾರಿಗೆ ಬರುವಂತೆ ಅರ್ಹ ಫಲಾನುಭವಿಗಳಿಗೆ 05 ಕೆ.ಜಿ ಅಕ್ಕಿಯನ್ನು ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲು ಆದೇಶಿಸಲಾಗಿರುತ್ತದೆ.

ಅದರಂತೆ ಫೆಬ್ರುವರಿ –2025 ತಿಂಗಳಲ್ಲಿ ವಿತರಿಸಬೇಕಾದ ಅಕ್ಕಿ ಪ್ರಮಾಣವನ್ನು ಸೇರಿ ಮಾರ್ಚ್–2025ರ ಮಾಹೆಯಲ್ಲಿ ಈ ಕೆಳಗಿನ ಪ್ರಮಾಣದಂತೆ ವಿತರಿಸಲಾಗುವುದು.

**ಮಾರ್ಚ್–2025 ತಿಂಗಳ ವಿತರಿಸುವ ಪ್ರಮಾಣ:**

ಎಎವೈ ಪಡಿತರ ಚೀಟಿಗೆ 1–ರಿಂದ 3 ಸದಸ್ಯರಿರುವ ಪಡಿತರ ಚೀಟಿಗೆ ವಿತರಿಸುವ ಒಟ್ಟು ಪ್ರಮಾಣ 35ಕೆ.ಜಿ, ಎಎವೈ 4 ಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಗೆ ಪ್ರತಿ ಸದಸ್ಯರಿಗೆ ಫೆಬ್ರವರಿ –2025ರ ಮಾಹೆಯ ಮತ್ತು ಮಾರ್ಚ್–2025 ರ ತಿಂಗಳಿಗೆ 0.5 ಕೆ.ಜಿ. ಹೆಚ್ಚುವರಿ ಅಕ್ಕಿ ವಿತರಿಸಲಾಗುವುದು.

ನಂತರ (ಪಿ.ಎಚ್.ಎಚ್.) ಆದ್ಯತಾ ಪಡಿತರ ಚೀಟಿ ಪ್ರತಿ ಸದಸ್ಯರಿಗೆ ಅನ್ನಭಾಗ್ಯ ಹೆಚ್ಚುವರಿ 05 ಕೆ.ಜಿ ಅಕ್ಕಿ

ಈ ತಿಂಗಳ 1ನೇ ತಾರೀಖಿನಿಂದ ತಿಂಗಳ ಕೊನೆಯವರೆಗೆ ಬೆಳಿಗ್ಗೆ 7 ರಿಂದ ರಾತ್ರಿ 8 ಗಂಟೆಯವರಗೆ ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದ್ಯಸರ ಇ–ಕೆವೈಸಿ ಮಾಡುವ ಹಾಗೂ ಪಡಿತರ ವಿತರಣೆಯ ಕಾರ್ಯ ಜರುಗಲಿದ್ದು, ಪಡಿತರ ಚೀಟಿದಾರರು ಬಯೋ ನೀಡಿದ ತಕ್ಷಣವೇ ಪಡಿತರ ಪಡೆಯಲು ತಿಳಿಸಿದೆ. ಇ–ಕೆವೈಸಿ ಮಾಡಿಸಲು ಪಡಿತರ ಚೀಟಿದಾರರು ಯಾವುದೇ ಶುಲ್ಕ ನಿಡುವಂತಿಲ್ಲ. ಪಡಿತರ ಚೀಟಿದಾರರು ತಮಗೆ ಹಂಚಿಕೆ ಮಾಡಿದ ಆಹಾರ ಧಾನ್ಯಗಳನ್ನು ದಾಸ್ತನು/ಸಾಗಾಣಿಕೆ ಮಾಡಿದರೆ ಅಂತಹವರ ಪಡಿತರ ಚೀಟಿಯನ್ನು ರದ್ದು ಪಡಿಸಲು ಕ್ರಮ ವಹಿಸಲಾಗುವುದು. ಕಾಳಸಂತೆಯಲ್ಲಿ ಅನಧಿಕೃತವಾಗಿ ಆಹಾರ ಧಾನ್ಯವನ್ನು ದಾಸ್ತನು/ಸಾಗಾಣಿಕೆ ಮಾಡುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ–1955 ರಡಿ ಕ್ರಮ ಜರುಗಿಸಲಾಗವುದು. ಪಡಿತರ ವಿತರಣೆ ಕುರಿತು ಏನಾದರೂ ದೂರುಗಳು ಇದ್ದಲ್ಲಿ ಸಹಾಯವಾಣಿ ಸಂಖ್ಯೆ:1967 ಕ್ಕೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಹಕ್ಕುಪತ್ರದಲ್ಲಿನ ಲೋಪ ಸರಿಪಡಿಸುವಂತೆ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಕ್ಕುಪತ್ರ (ಪಟ್ಟಾಬುಕ್)ನಲ್ಲಿ ಅಳತೆ ಲೋಪವನ್ನು ತಿದ್ದುಪಡಿ ಮಾಡಿ ಕೊಡುವಂತೆ ಆಗ್ರಹಿಸಿ ಸೋಮವಾರ ಕುಂದ್ರಳ್ಳಿ ತಾಂಡಾದ ನಿವಾಸಿಗಳು ಬಟ್ಟೂರ ಗ್ರಾ.ಪಂಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಈ ಕುರಿತು ತಾಂಡಾದ ಮುಖಂಡ ಸಂತೋಷ ರಾಠೋಡ ಮಾತನಾಡಿ, ಕಳೆದ 6 ತಿಂಗಳಿನಿಂದ ಮನೆಗಳ ಪಟ್ಟಾಬುಕ್‌ನಲ್ಲಿ ಉಂಟಾಗಿರುವ ಚಕ್ ಲೋಪದ ತಿದ್ದುಪಡಿಗೆ ಅಲೆದಾಡುತ್ತಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. 2 ವರ್ಷದ ಹಿಂದೆ 147 ಆಶ್ರಯ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಗಿತ್ತು. ಅದರಲ್ಲಿ ಚಕ್ ಬಂದಿ ಸರಿಯಾಗಿ ನಮೂದಾಗಿಲ್ಲ.



ಈ ಬಗ್ಗೆ ಕಳೆದ 6 ತಿಂಗಳ ಹಿಂದೆ ಶಾಸಕರು, ತಾ.ಪಂ ಇಓ, ಗ್ರಾ.ಪಂ ಅಧಿಕಾರಿಗಳಿಗೆ ಮನವಿ ಮಾಡಲಾಗಿತ್ತು. ಆದರೆ ಇದುವರೆಗೂ ಅಧಿಕಾರಿಗಳು ಹಾರಿಕೆ ಉತ್ತರ ನೀಡುತ್ತಾ ದಿನದೂಡುತ್ತಿದ್ದಾರೆ. ಇದರಿಂದ ಮನೆ ನಿರ್ಮಾಣಕ್ಕೆ ತೊಂದರೆಯಾಗಿದೆ.

ಅಲ್ಲದೇ ಗ್ರಾಮ ಪಂಚಾಯಿತಿಯಲ್ಲಿ ಸರ್ಕಾರಿ ಸೇವೆ, ಸೌಲಭ್ಯಗಳು ಜನರಿಗೆ ಸರಿಯಾಗಿ ಸಿಗುತ್ತಿಲ್ಲ. ಸಾಮಾನ್ಯ ಜನರ ಕೆಲಸಗಳಾಗುತ್ತಿಲ್ಲ. ಇಲ್ಲಿ ದುಡ್ಡು ಕೊಟ್ಟರೆ ಮಾತ್ರ ಕೆಲಸವೆಂಬಂತಾಗಿದೆ. ಗುತ್ತಿಗೆದಾರರು ಹೇಳಿದಂತೆ ಎಲ್ಲರೂ ಕೇಳುತ್ತಾರೆ. ಆದರೆ ಸಾಮಾನ್ಯ ಜನರ ಗೋಳು ಕೇಳುವರು ಯಾರು ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಾ.ಪಂ ಇಓ ಕೃಷ್ಣಪ್ಪ ಧರ್ಮರ ಪ್ರತಿಭಟನಾ ನಿರತರ ಸಮಸ್ಯೆ ಆಲಿಸಿ, ಪಿಡಿಓ ಮಲ್ಲೇಶ ಮಾದರ ಹಾಗೂ ಸಿಬ್ಬಂದಿಗಳಿಗೆ 10 ದಿನದಲ್ಲಿ ಈ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು. ಸಮಸ್ಯೆ ಬಗೆಹರಿಸದಿದ್ದರೆ ಸಿಇಓ ಅವರ ಗಮನಕ್ಕೆ ತಂತು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದಾಗ ನಿವಾಸಿಗಳು ಪ್ರತಿಭಟನೆಯಿಂದ ಹಿಂದೆ ಸರಿದರು.

ಈ ವೇಳೆ ಮಾನು ಲಮಾಣಿ, ಪ್ರವೀಣ ಲಮಾಣಿ, ಸಂತೋಷ ಪಮ್ಮಾರ, ರಮೇಶ ಲಮಾಣಿ, ಮಂಜು ಲಮಾಣಿ, ಉಮೇಶ ಲಮಾಣಿ, ಭೋಜಪ್ಪ ಕಾರಬಾರಿ, ರಮೇಶ ಪಮ್ಮಾರ, ಪ್ರಕಾಶ ಪಮ್ಮಾರ, ಸಂತೋಷ ಲಮಾಣಿ, ಈಶ್ವರ ಲಮಾಣಿ, ರವಿ ಲಮಾಣಿ, ಕುಬೇರ ಲಮಾಣಿ ಸೇರಿ ಕುಂದ್ರಳ್ಳಿ ತಾಂಡಾದ ನಿವಾಸಿಗಳಿದ್ದರು.

# ರಾಯಚೂರಿನಲ್ಲಿ ಖೋಟಾ ನೋಟಿನ ಜಾಲ ಪತ್ತೆ: ಕಾನ್ಸ್‌ಟೇಬಲ್ ಸೇರಿ ನಾಲ್ವರ ಬಂಧನ

**■ವಿಜಯಸಾಕ್ಷಿ ಸುದ್ದಿ, ರಾಯಚೂರು**

ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ಪಶ್ಚಿಮ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ಖೋಟಾ ನೋಟಿನ ಜಾಲವನ್ನು ಲಾಕ್ ಮಾಡಿದ್ದಾರೆ. 10 ಲಕ್ಷ ಅಸಲಿ ಹಣ ಕೊಟ್ರೆ 30 ಲಕ್ಷ ಖೋಟಾ ನೋಟು ಕೊಡ್ತಿದ್ದ ಗ್ಯಾಂಗ್ ಅನ್ನು ಬೇದಿಸಿ ರಾಯಚೂರಿನ ಶಶಸ್ತ್ರ ಮೀಸಲು ಪಡೆದ ಕಾನ್ಸ್‌ಟೇಬಲ್ ಸೇರಿ ನಾಲ್ವರನ್ನು ಅರೆಸ್ಟ್ ಮಾಡಲಾಗಿದೆ. ಸದ್ದಾಂ@ ಮೊಹಮ್ಮದ್ ಯಾಸಿನ್, ಶಶಸ್ತ್ರ ಮೀಸಲು ಪಡೆಯ ಕಾನ್ಸ್‌ಟೇಬಲ್ ಮರಿಲಿಂಗ, ರಮೇಶ್ ಆದಿ ಹಾಗೂ ಶಿವಲಿಂಗ ಬಂಧಿತ ಆರೋಪಿಗಳಾಗಿದ್ದು, ಹೈದರಾಬಾದ್‌ನ ಕಿಂಗ್ ಪಿನ್ ಒಬ್ಬನ ಮಾತಿನಂತೆ ಮರಿಲಿಂಗ ಟೀಂ ಈ ದಂಧೆಯನ್ನು ಮಾಡುತ್ತಿತ್ತು.

# ಸ್ಮರಣ ಸಂಚಿಕೆಗೆ ಲೇಖನಗಳ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ವಾಂಯ್.ಬಿ.ಎಂ. ಎಸ್. ಯೋಗಪಾಠಶಾಲೆ ಗದಗ ಸಂಸ್ಥೆ 1975ರಲ್ಲಿ ನಾಡ ಜನತೆಯ ಆರೋಗ್ಯ ಸಂರಕ್ಷಣೆ ಮತ್ತು ಯುವ ಜನತೆಯ ಸಬಲೀಕರಣಕ್ಕಾಗಿ ತ್ರಿವಿಧ ದಾಸೋಹಿ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಸ್ಥಾಪಿಸಿದ ಸಂಸ್ಥೆಯಾಗಿದೆ. ಯೋಗ ಪಾಠಶಾಲೆ ಇದೀಗ ತನ್ನ 50ನೇ ವರ್ಷದ ವಾರ್ಷಿಕ ಸಂಭ್ರಮಾಚರಣೆಯನ್ನು ಆಚರಿಸುವ ನಿಮಿತ್ತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಸುವರ್ಣ ಮಹೋತ್ಸವದ ಸವಿವನೆನಪಿಗಾಗಿ ಸ್ಮರಣ ಸಂಚಿಕೆಯನ್ನು ಹೊರತರುವ ಯೋಜನೆ ರೂಪಿಸಲಾಗಿದ್ದು, ಈ ದಿಸೆಯಲ್ಲಿ ಯೋಗ, ಆರೋಗ್ಯ, ಶಿಕ್ಷಣ, ಸೇವೆ, ಕ್ರೀಡೆ, ಸಾಧನೆ, ಚಿಕಿತ್ಸೆ, ಪರಿಸರ ಎಂಬಿತ್ಯಾದಿ ವಿಷಯಗಳ ಕುರಿತು ಲೇಖನ /ಕವನ /ಕಥೆ /ಚುಟುಕು ಕೃತಿಗಳನ್ನು ಆಹ್ವಾನಿಸಲಾಗುತ್ತಿದೆ. ಆಸಕ್ತ ಬರಹಗಾರರು ತಮಗೆ ಸಮಂಜಸವಾದ ವಿಷಯದ ಕುರಿತು ರಚಿಸಿದ ಕೃತಿಯನ್ನು ಎ4 ಅಳತೆಯ ಪೇಪರ್‌ನಲ್ಲಿ 1–3 ಪುಟಗಳಿಗೆ ಮೀರದಂತೆ ಕಳಿಸಬೇಕು. ತಮ್ಮ ಕೃತಿಯ ಮುಂಭಾಗ ಇಲ್ಲವೆ, ಹಿಂಭಾಗದಲ್ಲಿ ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಫೋಟೋ ಅಂಟಿಸಬೇಕು, ತಮ್ಮ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ತಪ್ಪದೇ ಬರೆದಿರಬೇಕು.

ಕೃತಿಯನ್ನು ತಲುಪಿಸಲು ಮತ್ತು ಹೆಚ್ಚಿನ ಮಾಹಿತಿಗಾಗಿ–ಸಂಯೋಜಕರು, ಸ್ಮರಣ ಸಂಚಿಕೆ ವಿಭಾಗ, ಎಸ್.ವಾಯ್.ಬಿ.ಎಂ. ಎಸ್. ಯೋಗಪಾಠಶಾಲೆ, ಬಸವಪ್ರಭೆ ಕ್ಯಾಂಪಸ್, ಸಿದ್ಧಲಿಂಗ ನಗರ, ಗದಗ –582 103. ದೂರವಾಣಿ ಸಂಖ್ಯೆ : 94483–17188, ಜ–ಟಚಿಟ : ಇಥಿಥಿ–ರಚಿ01@ರಟಚಿುಟ.ಛಿಠಿಟ ಕೃತಿಗಳನ್ನು ಖುದ್ದಾಗಿ/ ಅಂಚೆ /ಕೋರಿಯರ್ /ವಾಟ್ಸಾಪ್ / ಈ–ಮೇಲ್ ಮೂಲಕ ದಿನಾಂಕ 30–3–2025ರೊಳಗೆ ತಲುಪಿಸಬೇಕು ಎಂದು ಸ್ಮರಣ ಸಂಚಿಕೆಯ ಸಂಪಾದಕ ಮಂಡಳಿ ಪರವಾಗಿ ಯೋಗ ಪಾಠಶಾಲೆಯ ನಿರ್ದೇಶಕ ಕೆ.ಎಸ್. ಪಲ್ಲೇದ ವಿನಂತಿಸಿದ್ದಾರೆ.

**ಕಿಲ್ಲಾ ಚಂದ್ರಸಾಲಿಯ ಸರಕಾರಿ ಕಾಮ-ರತಿ ಉತ್ಸವ ಸಮಿತಿಯ ಶಾಂತಿ ಸಭೆಯಲ್ಲಿ ಸಿಪಿಐ ಡಿ.ಬಿ. ಪಾಟೀಲ**

# ಮೆರವಣಿಗೆ ಶಾಂತ ರೀತಿಯಲ್ಲಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕಿಲ್ಲಾ ಚಂದ್ರಸಾಲಿಯ ಸರಕಾರಿ ಕಾಮ–ರತಿ ಉತ್ಸವವು ಗದಗ ಜಿಲ್ಲೆಗೆ ಕಿರೀಟವಿದ್ದಂತೆ. ನವಲಗುಂದದ ರಾಮಲಿಂಗೇಶ್ವರ ಕಾಮ–ರತಿ ಉತ್ಸವದ ನಂತರ ಅತಿ ಹೆಚ್ಚು ಪ್ರಸಿದ್ಧಿ ಪಡೆದಿರುವ ಕಾಮ–ರತಿ ಉತ್ಸವ ಇದಾಗಿದೆ ಎಂದು ಗದಗ ಶಹರ ಪೊಲೀಸ್ ಠಾಣೆಯ ಸಿಪಿಐ ಡಿ.ಬಿ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಕಿಲ್ಲಾ ಓಣಿಯ ತ್ರಿಕೂಟೇಶ್ವರ ದೇವಸ್ಥಾನದ ಆವರಣದಲ್ಲಿ 160ನೇ ವರ್ಷದ ಕಿಲ್ಲಾ ಚಂದ್ರಸಾಲಿಯ ಸರಕಾರಿ ಕಾಮ–ರತಿ ಉತ್ಸವ ಸಮಿತಿಯಿಂದ ಹಮ್ಮಿಕೊಂಡ ಶಾಂತಿ ಸಭೆಯಲ್ಲಿ ಅವರು ಮಾತನಾಡಿ, ವರ್ಷದಿಂದ ವರ್ಷಕ್ಕೆ ಪ್ರಸಿದ್ಧಿ ಪಡೆಯುತ್ತಿರುವ ಕಿಲ್ಲಾ ಚಂದ್ರಸಾಲಿ ಸರಕಾರಿ ಕಾಮ–ರತಿ



ಉತ್ಸವ ಸಮಿತಿಗೆ ಪೊಲೀಸ್ ಇಲಾಖೆಯಿಂದ ಭದ್ರತೆಗಾಗಿ ಗನ್‌ಮ್ಯಾನ್ ನೀಡಲಾಗುವುದು. ಈ ಓಣಿಯ ಗುರು–ಹಿರಿಯರು ಯುವಕರಿಗೆ ಮಾರ್ಗದರ್ಶನ ನೀಡಿ ಮಂಗಳವಾರ ನಡೆಯುವ ಮೆರವಣಿಗೆಯನ್ನು ಬೇಗನೆ ಆರಂಭಿಸಿ ಬೇಗನೆ ಮುಗಿಸಬೇಕು ಎಂದು ಮನವಿ ಮಾಡಿದರು.

ಯುವ ಮುಖಂಡ ಸುಧೀರ ಕಾಟಿಗರ ಮಾತನಾಡಿ, 160 ವರ್ಷಗಳ ಹಿಂದೆ ನಮ್ಮ ಓಣಿಯ ಹಿರಿಯರು ಕೊಪ್ಪಳ ಜಿಲ್ಲೆಯ ಕಿನ್ನಾಳ ಗ್ರಾಮಕ್ಕೆ ನಡೆದುಕೊಂಡು ಹೋಗಿ ಕಾಮ–ರತಿಯನ್ನು ತಂದು ಪ್ರತಿಷ್ಠಾಪಿಸಿದ್ದಾರೆ. ನಂಬಿ ಬಂದವರಿಗೆ ಬೇಡಿದ ಫಲವನ್ನು ನೀಡುತ್ತಾ ಬಂದಿದ್ದರಿಂದ ಇಂದು ಭಕ್ತರಿಂದ ಸುಮಾರು 25 ಕೆ.ಜಿ.ಯಷ್ಟು ಬಂಗಾರದ ಒಡವೆಗಳನ್ನು ಧರಿಸುತ್ತಾ ಬಂದಿರುವುದು ಪ್ರಸಿದ್ಧಿಗೆ ಸಾಕ್ಷಿಯಾಗಿದೆ. ಅಲ್ಲದೆ, ಈ ಕಾಮ–ರತಿಗೆ ಶತಮಾನಗಳಿಂದ ಸರಕಾರಿ ಗೌರವದೊಂದಿಗೆ ಭದ್ರತೆ ನೀಡುತ್ತಾ ಬಂದಿರುವುದು ವಿಶೇಷವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಿಎಸ್‌ಐ ಕಿರಣಕುಮಾರ, ನಗರಸಭೆ ಸದಸ್ಯೆ ಶೈಲಾ ಬಾಕಳೆ, ಕಾಮ–ರತಿ ಸಮಿತಿಯ ಅಧ್ಯಕ್ಷ ಸುರೇಶ ಬಾಕಳೆ, ಉಪಾಧ್ಯಕ್ಷ ಮನೋಹರ ದಲಬಂಜನ, ಗೌರವ ಕಾರ್ಯದರ್ಶಿ ವೆಂಕಟೇಶ ಖೋಡೆ, ಕಾರ್ಯದರ್ಶಿ ವೆಂಕಟೇಶ ಬಾಂಡಗೆ, ಖಜಾಂಚಿ ಪ್ರಕಾಶ ಕಾಟಿಗರ, ಹಿರಿಯರಾದ ಕುಮಾರ ಬದಿ, ಪರಶುರಾಮ ಬದಿ, ಡಿ.ಎಚ್. ಕಬಾಡಿ, ಗೋಪಾಲ ಖೋಡೆ, ರಾಜೇಶ ಖೋಡೆ, ಅಂಜು ಖಟವಟೆ, ಶ್ರೀಕಾಂತ ಪವಾರ, ಮಾಧು ಬದಿ, ಸರೋಜಾಬಾಯಿ ಶೇಜವಾಡೇಕರ ಮುಂತಾದವರು ಉಪಸ್ಥಿತರಿದ್ದರು.

ಶ್ರೀಕಾಂತ ಬಾಕಳೆ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಪರಶುರಾಮ ಮಿಸ್ಕಿನ್ ವಂದಿಸಿದರು.

> ದಿ. ಬಾಬಾಸಾ ಡೋಂಗರಸಾ ಖೋಡೆ ಅವರು ಕಾಮ–ರತಿ ಉತ್ಸವ ಕಾರ್ಯಗಳಲ್ಲಿ ಸೇವೆ ಸಲ್ಲಿಸಿದ್ದರಿಂದ ಅವರ ಧರ್ಮಪತ್ನಿ ಕೌಶಲ್ಯಬಾಯಿ ಖೋಡೆ ಅವರಿಗೆ ಮತ್ತು ಸಮಿತಿಯ ಮಾಜಿ ಅಧ್ಯಕ್ಷ ಪ್ರೇಮನಾಥಸಾ ಖೋಡೆ ಅವರನ್ನು ಸಮಿತಿಯಿಂದ ಸನ್ಮಾನಿಸಲಾಯಿತು.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಮೇವುಂಡಿ–582113**

ತಾಲ್ಲೂಕ:ಮುಂಡರಗಿ ಜಿಲ್ಲೆ:ಗದಗ
ಇ–ಮೇಲ್ :–mevundi.mun.gdg@gmail.com

ಸಂ.ಗ್ರಾ.ಪಂ.ಮೇ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ: 15–03–2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಮೇವುಂಡಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಹೈತಾಪೂರ ಗ್ರಾಮದ ಹನಮಪ್ಪ ಶಿ ಕವಲೂರ ಇವರ ಹೊಲದಿಂದ ಕೊರ್ಲಹಳ್ಳಿ ಹೊಲದವರೆಗೆ ಮೊರಂ ರಸ್ತೆ ನಿರ್ಮಾಣ. | 1,36,321 |
| 2 | ಹೈತಾಪೂರ ಗ್ರಾಮದ ಜಗದೇಶ ಕವಲೂರ ಇವರ ಹೊಲದಿಂದ ಬಸಪ್ಪ ಸಣ್ಣದ್ಯಾವಣ್ಣವರ ಹೊಲದವರೆಗೆ ಮೊರಂ ರಸ್ತೆ ನಿರ್ಮಾಣ. | 1,36,321 |

**ಷರಾ:– ಖಾಲಿ ಟೆಂಡರ್ ಫಾರ್ಮ ಅನ್ನು 500 ರೂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು.**

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **15/03/2025 ರಿಂದ 19/03/2025** ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **20–03–2025 ಮುಂಜಾನೆ 10.00** ಗಂಟೆಯಿಂದ **ಮಧ್ಯಾಹ್ನ 2.30** ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ : **21 –03–2025 ರ ಮಧ್ಯಾಹ್ನ 3.00** ಗಂಟೆ.

**ನಿಬಂಧನೆಗಳು :** ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಮೇವುಂಡಿದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/– ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಮೇವುಂಡಿ**
**ಸಹಿ/– ಅಧ್ಯಕ್ಷರು ಗ್ರಾಮ ಪಂಚಾಯತಿ ಮೇವುಂಡಿ**

ವಾ.ಸಾ.ಇ/ಗದಗ/702/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka